


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 271 | ₹ ಬೆಲೆ: 4 | Friday, 22, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಅಧಿಕ ಆಸ್ತಿಗಳಿಕೆ ಪ್ರಕರಣ

### ತ.ನಾಡು ಸಚಿವ ಕೆ ಪೊನ್ಮುಡಿಗೆ 3 ವರ್ಷ ಜೈಲು



ಚೆನ್ನೈ: ಅಕ್ರಮ ಆಸ್ತಿ ಗಳಿಕೆ ಪ್ರಕರಣದಲ್ಲಿ ತಮಿಳುನಾಡು ರಾಜ್ಯದ ಉನ್ನತ ಶಿಕ್ಷಣ ಸಚಿವ ಕೆ ಪೊನ್ಮುಡಿ ಅವರಿಗೆ ಮದ್ರಾಸ್ ಹೈಕೋರ್ಟ್ ಗುರುವಾರ 3 ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ. ಮಂಗಳವಾರ, ಮದ್ರಾಸ್ ಹೈಕೋರ್ಟ್ ಈ ಪ್ರಕರಣದಲ್ಲಿ ಪೊನ್ಮುಡಿ ಮತ್ತು ಅವರ ಪತ್ನಿಯನ್ನು ದೋಷಿ ಎಂದು ಘೋಷಿಸಿತು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರನ್ನು ಖುಲಾಸೆಗೊಳಿಸಿದ ವಿಚಾರಣಾ ನ್ಯಾಯಾಲಯದ ಆದೇಶವನ್ನು ರದ್ದುಗೊಳಿಸಿತು. 2006 ರಿಂದ 2011 ರ ಅವಧಿಯಲ್ಲಿ ಪೊನ್ಮುಡಿ ಅವರು ಡಿಎಂಕೆ ನೇತೃತ್ವದ ಆಡಳಿತದಲ್ಲಿ ಸಚಿವರಾಗಿದ್ದಾಗ ಅವರ ಹೆಸರಲ್ಲಿ ಮತ್ತು ಅವರ ಪತ್ನಿಯ ಹೆಸರಿನಲ್ಲಿ ಸುಮಾರು ಶೇ. 65.99 ಕ್ಕೂ ಹೆಚ್ಚಿನ ಆದಾಯ ಗಳಿಸಿದ್ದರು. ನ್ಯಾಯಾಲಯ ಪೊನ್ಮುಡಿ ಮತ್ತು ಅವರ ಪತ್ನಿಗೆ ತಲಾ 50 ಲಕ್ಷ ದಂಡ ವಿಧಿಸಿ ಆದೇಶ ಹೊರಡಿಸಿದೆ. 1.75 ಕೋಟಿ ರೂ. ಅಕ್ರಮ ಆಸ್ತಿ ಪ್ರಕರಣದಲ್ಲಿ ಡಿಎಂಕೆ ನಾಯಕ ಮತ್ತು ಅವರ ಪತ್ನಿಯನ್ನು ದೋಷಿಗಳು ಎಂದು ಮದ್ರಾಸ್ ಹೈಕೋರ್ಟ್ ಎರಡು ದಿನಗಳ ಹಿಂದೆ ತೀರ್ಪು ನೀಡಿ ಇಂದು ಶಿಕ್ಷೆಯ ಪ್ರಮಾಣ ಪ್ರಕಟವಾಗಿದೆ. ಈ ಆದೇಶದಿಂದ ತಮಿಳುನಾಡು ಸಿಎಂ ಸ್ಟಾಲಿನ್ ಸರ್ಕಾರಕ್ಕೆ ಭಾರೀ ಹಿನ್ನಡೆಯಾಗಿದೆ. ಹೆಚ್ಚಿನ ಆದಾಯ ಗಳಿಸಿದ್ದರೂ 2016 ರಲ್ಲಿ ವಿಲ್ಲುಪುರಂನ ವಿಚಾರಣಾ ನ್ಯಾಯಾಲಯವು ಖುಲಾಸೆಗೊಳಿಸಿತು. ಮಂಗಳವಾರ, ಹೈಕೋರ್ಟ್ ಆ ತೀರ್ಪನ್ನು ರದ್ದುಗೊಳಿಸಿತು ಮತ್ತು ಭ್ರಷ್ಟಾಚಾರ ತಡೆ ಕಾಯ್ದೆ, 1988 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧದ ಆರೋಪವು ಇಬ್ಬರೂ ಆರೋಪಿಗಳ ವಿರುದ್ಧ ಸಾಬೀತಾಗಿದೆ. ತಮಿಳುನಾಡು ರಾಜ್ಯಪಾಲ ಆರ್.ಎನ್. ರವಿ ಅವರನ್ನು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಅವರನ್ನು ಸಂಪುಟದಿಂದ ಕೈಬಿಡಬೇಕೆಂದು ಒತ್ತಾಯಿಸಿದ ಮರುದಿನವೇ ಪೊನ್ಮುಡಿಯವರಿಗೆ ಈ ಶಿಕ್ಷೆ ವಿಧಿಸಲಾಗಿದೆ.

## ವಿಐಪಿಗಳ ಮೇಲೆ ಉಗ್ರರ ಕಣ್ಣು

### ಮುಂಬೈಯಲ್ಲಿ 1 ತಿಂಗಳು ಡ್ರೋನ್ ಹಾರಾಟ ನಿಷೇಧ



ಮುಂಬೈ: ಭಯೋತ್ಪಾದಕರು ಹಾಗೂ ಸಮಾಜಘಾತುಕ ಶಕ್ತಿಗಳು ವಿವಿಐಪಿಗಳನ್ನು ಗುರಿಯಾಗಿರಿಸಿ ಡ್ರೋನ್ ದಾಳಿ ಮಾಡುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮುಂದಿನ ಒಂದು ತಿಂಗಳ ಕಾಲ ನಗರದಲ್ಲಿ ಎಲ್ಲ ರೀತಿಯ ಡ್ರೋನ್ ಹಾರಾಟವನ್ನು ನಿಷೇಧಿಸಲಾಗಿದೆ. ಈ ಕುರಿತು ಮುಂಬೈ ಪೊಲೀಸ್ ಆದೇಶ ಹೊರಡಿಸಿದ್ದು, 2023 ಡಿಸೆಂಬರ್ 20ರಿಂದ 2024 ಜನವರಿ 18ರವರೆಗೆ ಡ್ರೋನ್ ಹಾರಾಟ ನಿಷೇಧಿಸಲಾಗಿದೆ ಎಂದು ತಿಳಿಸಿದೆ. ವಿವಿಐಪಿಗಳನ್ನು ಗುರಿಯಾಗಿಸಿ, ಸಾರ್ವಜನಿಕ ಆಸ್ತಿಪಾಸ್ತಿಗೆ ಅಪಾಯವನ್ನುಂಟು ಮಾಡಲು ಹಾಗೂ ಕಾನೂನು, ಸುವ್ಯವಸ್ಥೆ ಹದಗೆಡಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆಯ ಕ್ರಮದ ಭಾಗವಾಗಿ ನಗರದಲ್ಲಿ ಡ್ರೋನ್, ರಿಮೋಟ್ ನಿಯಂತ್ರಿತ ಮೈಕ್ರೋಲೈಟ್ ಏರ್‌ಕ್ರಾಫ್ಟ್, ಹ್ಯಾಂಡ್ ಗ್ಲೈಡರ್, ಹಾಟ್ ಏರ್ ಬಲೂನ್, ಪ್ಯಾರಾಗ್ಲೈಡರ್, ಪ್ಯಾರಾ ಮೋಟರ್‌ಗಳನ್ನು ನಿಷೇಧಿಸಲಾಗಿದೆ.

## 4 ವರ್ಷಕ್ಕಿಂತ ಕೆಳಗಿನ ಮಕ್ಕಳಿಗೆ ಶೀತ

### ನಿವಾರಕ ಔಷಧದ ಮಿಶ್ರಣ ನೀಡದಂತೆ ಸೂಚನೆ

ಮುಂಬೈ: ಭಯೋತ್ಪಾದಕರು ಹಾಗೂ ಸಮಾಜಘಾತುಕ ಶಕ್ತಿಗಳು ವಿವಿಐಪಿಗಳನ್ನು ಗುರಿಯಾಗಿರಿಸಿ ಡ್ರೋನ್ ದಾಳಿ ಮಾಡುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮುಂದಿನ ಒಂದು ತಿಂಗಳ ಕಾಲ ನಗರದಲ್ಲಿ ಎಲ್ಲ ರೀತಿಯ ಡ್ರೋನ್ ಹಾರಾಟವನ್ನು ನಿಷೇಧಿಸಲಾಗಿದೆ. ಈ ಕುರಿತು ಮುಂಬೈ ಪೊಲೀಸ್ ಆದೇಶ ಹೊರಡಿಸಿದ್ದು, 2023 ಡಿಸೆಂಬರ್ 20ರಿಂದ 2024 ಜನವರಿ 18ರವರೆಗೆ ಡ್ರೋನ್ ಹಾರಾಟ ನಿಷೇಧಿಸಲಾಗಿದೆ ಎಂದು ತಿಳಿಸಿದೆ. ವಿವಿಐಪಿಗಳನ್ನು ಗುರಿಯಾಗಿಸಿ, ಸಾರ್ವಜನಿಕ ಆಸ್ತಿಪಾಸ್ತಿಗೆ ಅಪಾಯವನ್ನುಂಟು ಮಾಡಲು ಹಾಗೂ ಕಾನೂನು, ಸುವ್ಯವಸ್ಥೆ ಹದಗೆಡಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆಯ ಕ್ರಮದ ಭಾಗವಾಗಿ ನಗರದಲ್ಲಿ ಡ್ರೋನ್, ರಿಮೋಟ್ ನಿಯಂತ್ರಿತ ಮೈಕ್ರೋಲೈಟ್ ಏರ್‌ಕ್ರಾಫ್ಟ್, ಹ್ಯಾಂಡ್ ಗ್ಲೈಡರ್, ಹಾಟ್ ಏರ್ ಬಲೂನ್, ಪ್ಯಾರಾಗ್ಲೈಡರ್, ಪ್ಯಾರಾ ಮೋಟರ್‌ಗಳನ್ನು ನಿಷೇಧಿಸಲಾಗಿದೆ.

## ಸಂಸತ್ ಭದ್ರತಾ ಲೋಪ

### ಆರೋಪಿಗಳ ಪೊಲೀಸ್ ಕಸ್ಟಡಿ ಅವಧಿ ವಿಸ್ತರಣೆ


ನವದೆಹಲಿ: ಸಂಸತ್ತಿನ ಭದ್ರತಾ ಲೋಪ ಪ್ರಕರಣದಲ್ಲಿ ಬಂಧಿತರಾಗಿರುವ ನಾಲ್ವರು ಆರೋಪಿಗಳ ಪೊಲೀಸ್ ಕಸ್ಟಡಿ ಅವಧಿಯನ್ನು ದೆಹಲಿ ನ್ಯಾಯಾಲಯ ಜನವರಿ 5 ರವರೆಗೆ ವಿಸ್ತರಿಸಿದೆ. ವಿಶೇಷ ನ್ಯಾಯಾಧೀಶ ಹರ್ದೀಪ್ ಕೌರ್ ಅವರು, ಆರೋಪಿಗಳಾದ ಡಿ. ಮನೋರಂಜನ್, ಸಾಗರ್ ಶರ್ಮಾ, ಅಮೋಲ್ ಧನರಾಜ್ ಶಿಂಧೆ ಹಾಗೂ ನೀಲಂ ದೇವಿ ಅವರ ಕಸ್ಟಡಿ ಅವಧಿಯನ್ನು 15 ದಿನಗಳವರೆಗೆ ವಿಸ್ತರಿಸಿದ್ದಾರೆ. ಬಂಧಿತರಾಗಿರುವ ನಾಲ್ವರು ಆರೋಪಿಗಳನ್ನು ದೆಹಲಿ ಪೊಲೀಸರು ಗುರುವಾರ ಇಲ್ಲಿನ ವಿಶೇಷ ನ್ಯಾಯಾಧೀಶ ಹರ್ದೀಪ್ ಕೌರ್ ಅವರ ಮುಂದೆ ಹಾಜರುಪಡಿಸಿದ್ದರು. ಸದ್ಯದಲ್ಲೇ ನ್ಯಾಯಾಲಯ ಈ ಪ್ರಕರಣವನ್ನು ಕೈಗೆತ್ತಿಕೊಳ್ಳುವ ಸಾಧ್ಯತೆಯಿದೆ.

# ಕರ್ನಾಟಕದ ಬರಗಾಲದ ಸಮಸ್ಯೆಗೆ ಸ್ಪಂಧಿಸಿ

## ಕೇಂದ್ರಕ್ಕೆ ಈರಣ್ಣ ಕಡಾಡಿ ಮನವಿ

**ನವದೆಹಲಿ: ಕರ್ನಾಟಕ ರಾಜ್ಯದಲ್ಲಿ ಬರಗಾಲದಿಂದ ರೈತರು ಎದುರಿಸುತ್ತಿರುವ ಸಂಕಷ್ಟದ ಪರಿಸ್ಥಿತಿ ಪರಿಹರಿಸಲು ಕೇಂದ್ರ ಸರ್ಕಾರ ರಾಜ್ಯದ ಬರಗಾಲದ ಸಮಸ್ಯೆಗೆ ಸ್ಪಂದಿಸಿ ಸಹಾಯ ಮಾಡಬೇಕೆಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ದೆಹಲಿಯ ಸಂಸತ್ತಿನ ಚಳಿಗಾಲ ಅಧಿವೇಶನದ ಶೂನ್ಯವೇಳೆಯಲ್ಲಿ ಮನವಿ ಮಾಡಿದರು.**

ಕರ್ನಾಟಕ ರಾಜ್ಯದಲ್ಲಿ ಮುಂಗಾರು ಮತ್ತು ಹಿಂಗಾರಿನ ಈ ಎರಡು ಅವಧಿಯಲ್ಲಿ ಪ್ರತಿವರ್ಷ ಸಾಮಾನ್ಯವಾಗಿ 131 ಮೀ.ಮೀ ನಿಂದ 138 ಮೀ.ಮೀ ವರೆಗೆ ವಾಡಿಕೆಯ ಮಳೆಯಾಗುತ್ತಿತ್ತು. ಆದರೆ ಪ್ರಸ್ತುತ ವರ್ಷದಲ್ಲಿ 47 ಮೀ.ಮೀ ನಿಂದ 107 ಮೀ.ಮೀ ಮಳೆಯಾಗಿದ್ದು, ಶೇ.47 ರಿಂದ ಶೇ.65 ರಷ್ಟು ಮಳೆಯ ಕೊರತೆಯಾಗಿದೆ ಎಂದು ಗಮನ ಸೆಳೆದರು. ಕರ್ನಾಟಕ ರಾಜ್ಯದಲ್ಲಿ 14 ಜಲಾಶಯಗಳಿದ್ದು ಒಟ್ಟು ನೀರಿನ ಸಂಗ್ರಹದ ಸಾಮರ್ಥ್ಯ 896 ಟಿ.ಎಂ.ಸಿ ಇರುತ್ತದೆ. ಪ್ರಸ್ತುತ ವರ್ಷ ಈ ಜಲಾಶಯಗಳಲ್ಲಿ ಕೇವಲ 404 ಟಿ.ಎಂ.ಸಿ ಪ್ರಮಾಣದಷ್ಟು ಮಾತ್ರ ನೀರಿನ ಸಂಗ್ರಹವಿದೆ. ರಾಜ್ಯದ ಒಟ್ಟಾರೆ ಜಲಾಶಯಗಳಲ್ಲಿ ಶೇ. 45ರಷ್ಟು ಪ್ರಮಾಣದ ನೀರಿನ ಸಂಗ್ರಹವಿದ್ದು, ಶೇ. 55 ರಷ್ಟು ಪ್ರಮಾಣದ ನೀರಿನ ಕೊರತೆ ಜಲಾಶಯಗಳಲ್ಲಿ ಕಂಡು ಬರುತ್ತದೆ. ತೀವ್ರ ಮಳೆಯ ಕೊರತೆಯಿಂದಾಗಿ ಅಂತರ್ಜಲ ಮಟ್ಟ ರಾಜ್ಯದಲ್ಲಿ ಶೇ. 11 ರಷ್ಟು ಕುಸಿತ ಕಂಡಿದೆ. ಇದರ ಪರಿಣಾಮ ರಾಜ್ಯದ 236 ತಾಲ್ಲೂಕುಗಳ ಪೈಕಿ 223 ತಾಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲಾಗಿದೆ. ರಾಜ್ಯದ ಸುಮಾರು 600 ಗ್ರಾಮ ಪಂಚಾಯತಗಳಲ್ಲಿ ಕುಡಿಯುವ ನೀರಿನ ತೀವ್ರ ಕೊರತೆ ಉಂಟಾಗುವ ಸಂಭವವಿದೆ ಎಂದು ವಿವರಿಸಿದರು.



ರಾಜ್ಯದಲ್ಲಿ ಪ್ರತಿವರ್ಷ 83 ಲಕ್ಷ ಹೆಕ್ಟೇರ್ ಬೆಳೆ ಬಿತ್ತನೆಯಾಗಬೇಕು. ಆದರೆ ಈ ವರ್ಷ ಕೇವಲ 74 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದು ಅದರಲ್ಲಿ 48 ಲಕ್ಷ ಹೆಕ್ಟೇರ್ ಬೆಳೆ ನೀರಿನ ಅಭಾವದಿಂದ ಹಾನಿಯಾಗಿದೆ ಎಂದು ತಿಳಿದು ಬಂದಿದೆ. ದನ ಕರುಗಳಿಗೆ ಮುಂದಿನ ಬೇಸಿಗೆ ತಿಂಗಳುಗಳಲ್ಲಿ ಮೇವಿನ ಕೊರತೆ ಕಾಣಿಸಿಕೊಳ್ಳುವ ಸಂಭವವಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಆರ್ಥಿಕ ವರ್ಷದಲ್ಲಿ ಸುಮಾರು 456 ಜನ ರೈತರು ಆತ್ಮಹತ್ಯೆ ಮಾಡಿಕೊಂಡಿರುವ ವರದಿ ಅತ್ಯಂತ ದುರ್ದೈವದ ಹಾಗೂ ನೋವಿನ ಸಂಗತಿ. ಇಷ್ಟೊಂದು ಗಂಭೀರ ಸಮಸ್ಯೆಗಳನ್ನು ಜನತೆ ಎದುರಿಸುತ್ತಿರುವ ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರ ಕೇವಲ ಕೇಂದ್ರ ಸರ್ಕಾರದ ಕಡೆಗೆ ಬೆರಳು ತೋರಿಸುವ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ನಾವು ಹಿಂದಿನ ಅಂಕಿ ಸಂಖ್ಯೆ ಪರಿಶೀಲಿಸಿದಾಗ ಕೇಂದ್ರದಲ್ಲಿ ಕಾಂಗ್ರೆಸ್ ಸರಕಾರದ ಆಡಳಿತದ ಸಮಯದಲ್ಲಿ ಕರ್ನಾಟಕಕ್ಕೆ ಎಸ್.ಡಿ.ಆರ್.ಎಫ್ ಅಡಿಯಲ್ಲಿ ಕೇವಲ 812 ಕೋಟಿ ರೂಪಾಯಿ ಮತ್ತು ಎನ್.ಡಿ.ಆರ್.ಎಫ್ ಅಡಿಯಲ್ಲಿ 3,232 ಕೋಟಿ ರೂ.ಗಳ ನೆರವು ನೀಡಲಾಗಿದೆ. ಆದರೆ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ಎಸ್.ಡಿ.ಆರ್.ಎಫ್ ಅಡಿ 2,778 ಕೋಟಿ ರೂಪಾಯಿ ಮತ್ತು ಎನ್.ಡಿ.ಆರ್.ಎಫ್ ಅಡಿ 12,542 ಕೋಟಿ ರೂಪಾಯಿ ನೆರವನ್ನು ನೀಡಲಾಗಿದೆ. ಆದರೂ ಕೂಡಾ ಕೇಂದ್ರ ಸರ್ಕಾರದ ಮೇಲೆ ರಾಜ್ಯ ಸರ್ಕಾರ ಟೀಕೆ ಮಾಡುವುದನ್ನು ನಿಲ್ಲಿಸಿಲ್ಲ ಎಂದು ಆಕ್ಷೇಪಿಸಿದರು. ವಿಧಾನಸಭಾ ಚುನಾವಣೆಗೆ ಮುಂಚೆ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷವು ತಾನು ನೀಡಿದ ಗ್ಯಾರಂಟಿಗಳನ್ನು ಸರ್ಕಾರ ರಚನೆಯಾದ ನಂತರ ಜಾರಿಗೊಳಿಸಲು ವಿಫಲವಾಗಿದೆ ಹಾಗೂ ಭೀಕರ ಬರಗಾಲಕ್ಕೆ ತುತ್ತಾಗಿರುವ ರಾಜ್ಯದ ರೈತರ ನೆರವಿಗೂ ಕೂಡ ಬರಲಾಗುತ್ತಿಲ್ಲ. ಕಾಂಗ್ರೆಸ್ ಸರ್ಕಾರದ ಸುಳ್ಳು ಭರವಸೆ ಮತ್ತು ಸಂಪೂರ್ಣ ವಿಫಲತೆಯ ಕಾರಣದಿಂದ ನಮ್ಮ ರಾಜ್ಯದ ರೈತರು ಕಂಗಾಲಾಗಿದ್ದಾರೆ.ಆದ್ದರಿಂದ ಕರ್ನಾಟಕದ ಜನತೆಯ ಹಿತದೃಷ್ಟಿಯಿಂದ ತೊಂದರೆಯಲ್ಲಿರುವ ರೈತರಿಗೆ ನೆರವಾಗಲು, ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ನಮ್ಮ ರಾಜ್ಯದ ಬರಗಾಲದ ಸಮಸ್ಯೆಗೆ ಸ್ಪಂದಿಸಿ ಸಹಾಯ ಮಾಡಬೇಕೆಂದು ಸರ್ಕಾರಕ್ಕೆ ವಿನಂತಿಸಿದರು.

## ಕೋವಿಡ್ 19 ಪರಿಸ್ಥಿತಿ ಕುರಿತು ಸಿಎಂ ಸಭೆ

### ಆಕ್ಸಿಜನ್, ವೆಂಟಿಲೇಟರ್, ಬೆಡ್‌ಗಳ ಲಭ್ಯತೆ ಖಾತ್ರಿಗೊಳಿಸಲು ಸೂಚನೆ



ಬೆಂಗಳೂರು: ರಾಜ್ಯದಲ್ಲಿ ಕೋವಿಡ್ 19 ಪ್ರಕರಣಗಳು ಮತ್ತೆ ಹೆಚ್ಚಳವಾಗುತ್ತಿರುವ ಹಾಗೂ ಬೆಂಗಳೂರಿನಲ್ಲಿ ಕೋವಿಡ್‌ನಿಂದಾಗಿ ಕಳೆದ ಮೂರು ದಿನಗಳಲ್ಲಿ ಮೂವರು ಮೃತಪಟ್ಟಿರುವ ಹಿನ್ನೆಲೆಯಲ್ಲಿ ರಾಜ್ಯದ ಸ್ಥಿತಿಗತಿಯ ಕುರಿತು ಚರ್ಚಿಸಲು ಹಾಗೂ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಚರ್ಚಿಸಲು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಚರ್ಚೆ ನಡೆಸಲಾಯಿತು.

ರಾಜ್ಯದಲ್ಲಿರುವ ಒಟ್ಟು 92 ಸಕ್ರಿಯ ಪ್ರಕರಣಗಳಲ್ಲಿ 80 ಬೆಂಗಳೂರು ನಗರದಲ್ಲಿ ಇದೆ. ಉಳಿದಂತೆ ಮೈಸೂರಿನಲ್ಲಿ 5, ಬಳ್ಳಾರಿಯಲ್ಲಿ 3, ರಾಮನಗರ ಹಾಗೂ ಮಂಡ್ಯದಲ್ಲಿ ತಲಾ 1 ಪ್ರಕರಣ ವರದಿಯಾಗಿದೆ. ಇವರಲ್ಲಿ 72 ಜನ ಮನೆಯಲ್ಲಿಯೇ ಪ್ರತ್ಯೇಕವಾಗಿದ್ದಾರೆ. 20 ಜನ ಆಸ್ಪತ್ರೆಗೆ ದಾಖಲಾಗಿದ್ದಾರೆ. ಏಳು ಜನರು ಐಸಿಯುನಲ್ಲಿದ್ದು, ಇವರೆಲ್ಲರೂ ಇತರ ಸಮಸ್ಯೆಗಳಿಂದಲೂ ಬಳಲುತ್ತಿದ್ದಾರೆ. ಅದಾಗ್ಯೂ ಜನರು ಆತಂಕ ಪಡುವ ಅಗತ್ಯವಿಲ್ಲ. ಆದರೆ ಮುನ್ನೆಚ್ಚರಿಕೆ ಕ್ರಮಗಳನ್ನು ಅಗತ್ಯವಾಗಿ ಕೈಗೊಳ್ಳಬೇಕಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ತಾಂತ್ರಿಕ ಸಲಹಾ ಸಮಿತಿ ನೀಡಿರುವ ಸಲಹೆಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಆಕ್ಸಿಜನ್, ವೆಂಟಿಲೇಟರ್, ಬೆಡ್‌ಗಳು ಯಾವುದಕ್ಕೂ ತೊಂದರೆ ಆಗಬಾರದು. ಆಕ್ಸಿಜನ್ ಲಭ್ಯತೆ ಖಾತ್ರಿಗೊಳಿಸಬೇಕು. ಇದಕ್ಕೆ ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗಳು ಸನ್ನದ್ಧವಾಗಿ ಯಾವುದೂ ಕೊರತೆಯಾಗದಂತೆ ನೋಡಿಕೊಳ್ಳಬೇಕು. ತಾಂತ್ರಿಕ ಸಲಹಾ ಸಮಿತಿಯ ಸಲಹೆಗಳನ್ನು ಪಾಲಿಸಬೇಕು. ಎಲ್ಲರೂ ಜವಾಬ್ದಾರಿ ಅರಿತು ಕೆಲಸ ಮಾಡಬೇಕು ಎಂದರು. ಕೋವಿಡ್ ನ ಸಮರ್ಪಕ ನಿರ್ವಹಣೆ ಹಾಗೂ ಪಾರದರ್ಶಕತೆಗಾಗಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲು ತೀರ್ಮಾನಿಸಲಾಗಿದ್ದು, ಎಲ್ಲ ಆಸ್ಪತ್ರೆಗಳಲ್ಲಿ ಪೂರ್ವ ಸಿದ್ಧತೆ ಪರಿಶೀಲನೆ ಮಾಡಲಾಗಿದೆ. ಎಲ್ಲ ಆಸ್ಪತ್ರೆಗಳೂ ಕೋವಿಡ್ ಪ್ರಕರಣಗಳನ್ನು ನಿರ್ವಹಿಸಲು ಸಿದ್ಧತೆ ನಡೆಸಿಕೊಳ್ಳಲು ಸೂಚಿಸಲಾಗಿದೆ. ತಾಂತ್ರಿಕ ಸಲಹಾ ಸಮಿತಿಯ ಶಿಫಾರಸುಗಳು ಹಾಗೂ ರಾಜ್ಯದಲ್ಲಿ ಹೊರಡಿಸಿರುವ ಮಾರ್ಗಸೂಚಿಗಳು, 60 ವರ್ಷ ಮೇಲ್ಪಟ್ಟ ಎಲ್ಲರೂ, ಕಿಡ್ನಿ, ಹೃದಯ, ಲಿವರ್ ಸಮಸ್ಯೆಗಳಿಂದ ಬಳಲುತ್ತಿರುವವರು, ಗರ್ಭಿಣಿ ಹಾಗೂ ಬಾಣಂತಿಯರು ಮಾಸ್ಕ್ ಧರಿಸುವುದು ಹಾಗೂ ಮುಚ್ಚಿದ, ಹೆಚ್ಚು ಗಾಳಿಯಾಡದ ಸ್ಥಳಗಳಿಗೆ ಹಾಗೂ ಜನಸಂದಣಿ ಇರುವ ಸ್ಥಳಗಳಿಗೆ ಭೇಟಿ ನೀಡದೆ ಇರದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು. ಉಸಿರಾಟದ ಸಮಸ್ಯೆಯ ಲಕ್ಷಣಗಳಾದ ಜ್ವರ, ಕೆಮ್ಮು, ಶೀತ, ನೆಗಡಿ ಇತ್ಯಾದಿಗಳಿಂದ ಬಳಲುತ್ತಿರುವವರು ಕೂಡಲೇ ವೈದ್ಯಕೀಯ ಸಮಾಲೋಚನೆ ನಡೆಸುವುದು ಹಾಗೂ ಮಾಸ್ಕ್ ಧರಿಸುವುದು. ವೈಯಕ್ತಿಕ ಸ್ವಚ್ಛತೆಯನ್ನು ಕಾಪಾಡುವುದು. ಅನಾರೋಗ್ಯ ಪೀಡಿತರಾದರೆ ಮನೆಯಲ್ಲೇ ಇರಿ ಹಾಗೂ ಇತರರೊಂದಿಗೆ ಸಂಪರ್ಕವನ್ನು ಕಡಿಮೆ ಮಾಡಿ. ಜನಸಂದಣಿಯ ಪ್ರದೇಶದಲ್ಲಿ ಮಾಸ್ಕ್ ಧರಿಸುವುದು ಉತ್ತಮ ಎಂದರು.

ವಿದೇಶ ಪ್ರವಾಸದ ಸಂದರ್ಭದಲ್ಲಿ ಮುನ್ನೆಚ್ಚರಿಕೆಯ ಕ್ರಮಗಳನ್ನು ಕೈಗೊಳ್ಳಬೇಕು. ರಾಜ್ಯವೂ ಕೇರಳ ಮತ್ತು ತಮಿಳು ನಾಡು ಗಡಿ ಭಾಗದಲ್ಲಿ ಜ್ವರದ ಪ್ರಕರಣಗಳ ಮೇಲೆ ನಿಗಾ ವಹಿಸಿ, ಪರೀಕ್ಷೆ ಮತ್ತು ವರದಿ ಮಾಡುವ ವ್ಯವಸ್ಥೆ ಮಾಡಲಾಗುತ್ತಿದೆ. ಎಲ್ಲ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಲ್ಲಿ ಉಸಿರಾಟದ ತೊಂದರೆ ಮತ್ತು 20 ರಲ್ಲಿ 1 ಜ್ವರ (ಖಐಖ) ದ ಪ್ರಕರಣಗಳಲ್ಲಿ ಕಡ್ಡಾಯವಾಗಿ ಪರೀಕ್ಷೆ ಮಾಡಿಸಿಕೊಳ್ಳಬೇಕೆಂದು ಮುಖ್ಯಮಂತ್ರಿ ಸೂಚಿಸಿದರು.

# ಜೆಡಿಎಸ್ ಮುಖಂಡರಿಂದ ಪ್ರಧಾನಿ ಮೋದಿ ಭೇಟಿ



**ಬೆಂಗಳೂರು: ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಮಾಡಿಕೊಳ್ಳುವ ಬಗ್ಗೆ ನಿರ್ಧಾರ ಪ್ರಕಟವಾದ ನಂತರ ಇದೇ ಮೊದಲ ಬಾರಿಗೆ ಜೆಡಿಎಸ್ ಮುಖಂಡರು ಪ್ರಧಾನಿ ನರೇಂದ್ರ ಮೋದಿಯನ್ನು ಭೇಟಿಯಾಗಿದ್ದಾರೆ. ದೆಹಲಿಯ ಸಂಸತ್ ಭವನದಲ್ಲಿ ಇಂದು ಮಾಜಿ ಪ್ರಧಾನಿ ಎಚ್.ಡಿ ದೇವೇಗೌಡ ಪುತ್ರರಾದ ಎಚ್.ಡಿ ಕುಮಾರಸ್ವಾಮಿ ಮತ್ತು ಎಚ್.ಡಿ ರೇವಣ್ಣ ಅವರ ಜೊತೆ ಪ್ರಧಾನಿ ಮೋದಿ ಭೇಟಿಯಾಗಿದ್ದಾರೆ. ಈ ವಿಚಾರವನ್ನು ಪ್ರಧಾನಿ ಮೋದಿ ಎಕ್ಸ್ ( ಟ್ವಿಟರ್ ) ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ರಾಷ್ಟ್ರದ ಪ್ರಗತಿಗೆ ದೇವೇಗೌಡ ಜಿ ಅವರ ಅನುಕರಣೀಯ ಕೊಡುಗೆಯನ್ನು ಭಾರತವು ಬಹಳವಾಗಿ ಗೌರವಿಸುತ್ತದೆ ಎಂದು ಪೋಸ್ಟ್ ಮಾಡಿದ್ದಾರೆ.**

# ಪ್ರತಿಭಟನೆ ಕೈಬಿಡಿ ಇಲ್ಲ, ಕಠಿಣ ಕ್ರಮ ಎದುರಿಸಿ

## ಅಥಿತಿ ಉಪನ್ಯಾಸಕರಿಗೆ ಎಚ್ಚರಿಕೆ



ಚಿಕ್ಕಬಳ್ಳಾಪುರಖ ಅತಿಥಿ ಉಪನ್ಯಾಸಕರ ಸಮಸ್ಯೆಗಳನ್ನು ಕಾನೂನಿನ ಚೌಕಟ್ಟಿನಡಿ ಬಗೆಹರಿಸಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದ್ದು, ಅತಿಥಿ ಉಪನ್ಯಾಸಕರು ಸರ್ಕಾರದ ಮೇಲೆ ವಿಶ್ವಾಸವಿಟ್ಟು ಮುಷ್ಕರ ಕೈಬಿಡಬೇಕು. ಇಲ್ಲದೇ ಹೋದರೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕಠಿಣ ನಿರ್ಧಾರ ತೆಗೆದುಕೊಳ್ಳುವುದು ಅನಿವಾರ್ಯವಾಗುತ್ತದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಎಚ್ಚರಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅತಿಥಿ ಉಪನ್ಯಾಸಕರ ಸಮಸ್ಯೆಗಳು ಇಂದು, ನೆನ್ನೆಯದಲ್ಲ. ಸುಮಾರು ವರ್ಷಗಳಿಂದಲೂ ನನೆಗುದಿಯಲ್ಲಿದೆ. ತಾವು ಈ ಬಗ್ಗೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದ್ದು, ಅದರ ಹೊರತಾಗಿಯೂ ಅತಿಥಿ ಉಪನ್ಯಾಸಕರು ಮುಷ್ಕರ ಮುಂದುವರೆಸುತ್ತಿರುವುದು ಸರಿಯಲ್ಲ ಎಂದರು. ಸರ್ಕಾರ ತಾತ್ಕಾಲಿಕವಾಗಿ ನಿರ್ಧಾರ ತೆಗೆದುಕೊಂಡು ಸಮಸ್ಯೆ ಬಗೆಹರಿಸಬಹುದು. ಆದರೆ ಅದನ್ನು ಯಾರಾದರೂ ನ್ಯಾಯಾಲಯದಲ್ಲಿ ಪ್ರಶ್ನೆ ಮಾಡಿದರೆ ಕಾನೂನಾತ್ಮಕವಾಗಿ ತೊಂದರೆಯಾಗಲಿದೆ. ಅಭ್ಯರ್ಥಿಗಳ ಭವಿಷ್ಯವೇ ತ್ರಿಶಂಕು ಸ್ಥಿತಿಗೆ ಸಿಲುಕಲಿದೆ. ಹೀಗಾಗಿ ತರಾತುರಿಯಲ್ಲಿ ಇಂತಿಷ್ಟೇ ಸಮಯದಲ್ಲಿ ನಿರ್ಧಾರ ತೆಗೆದುಕೊಳ್ಳಿ ಎಂದು ಒತ್ತಡ ಹೇರುವುದು ಸರಿಯಲ್ಲ ಎಂದು ಹೇಳಿದರು. ಹಿಂದಿನ ಸರ್ಕಾರ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ. ಖಾಯಂ ಮಾಡಲು ಸಾಧ್ಯವೇ ಇಲ್ಲ ಎಂದು ಸ್ಪಷ್ಟ ಉತ್ತರ ನೀಡಿತ್ತು. ನಾವು ಚುನಾವಣೆ ಪ್ರಣಾಳಿಕೆಯಲ್ಲಿ ಅತಿಥಿ ಉಪನ್ಯಾಸಕರ ಪರವಾಗಿ ಇರುವುದಾಗಿ ಭರವಸೆ ನೀಡಿದ್ದೆವು. ಅದಕ್ಕೆ ತಕ್ಕ ಹಾಗೆ ಕಾನೂನಾತ್ಮಕವಾಗಿ ಯಾವ ರೀತಿ ಅವಕಾಶ ಕಲ್ಪಿಸಬಹುದು ಎಂಬ ಪರಿಶೀಲನೆ ನಡೆಸುತ್ತಿದ್ದೇವೆ ಎಂದರು.

ಪಾಠ ಪ್ರವಚನಗಳನ್ನು ಸ್ಥಗಿತಗೊಳಿಸಿ ಮುಷ್ಕರ ನಡೆಸುತ್ತಿರುವುದು ಸರಿಯಲ್ಲ. ಕೆಲ ಸಂಘಟನೆಗಳು ಮುಷ್ಕರದಿಂದ ಹಿಂದೆ ಸರಿಯುವುದಾಗಿ ತಮ್ಮೊಂದಿಗೆ ಹೇಳಿವೆ. ಆದರೆ ಅದಿನ್ನೂ ಜಾರಿಯಾಗಿಲ್ಲ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನಾವು ಯೋಚಿಸಬೇಕಿದೆ. ಒಂದು ತಿಂಗಳಿನಿಂದಲೂ ಪ್ರತಿಭಟನೆಗಳು ನಡೆಯುತ್ತಿವೆ. ಸರ್ಕಾರ ನಿಮ್ಮ ಬೇಡಿಕೆಗಳನ್ನು ಸಹಾನುಭೂತಿಯಿಂದ ಪರಿಶೀಲಿಸುತ್ತಿದೆ. ಆಡಳಿತಾತ್ಮಕ ಹಾಗೂ ಕಾನೂನಾತ್ಮಕವಾಗಿ ಚರ್ಚೆಗಳಾಗುತ್ತಿವೆ. ಈಗಲೂ ನೀವು ಮುಷ್ಕರ ಕೈಬಿಡದೇ ಇದ್ದರೆ ನಾವು ಬೇರೆ ರೀತಿಯ ನಿರ್ಧಾರ ತೆಗೆದುಕೊಳ್ಳಬೇಕಾಗಬಹುದು ಎಂದು ಎಚ್ಚರಿಸಿದರು. ಕೋವಿಡ್ನ ಜೆಎನ್–1 ರ ಹರಡುವಿಕೆಯನ್ನು ನಿಯಂತ್ರಿಸಲು ಎಲ್ಲರೂ ಮಾಸ್ಕ್ ಧರಿಸುವುದು ಸೂಕ್ತ. ರಾಜ್ಯವಷ್ಟೇ ಅಲ್ಲ, ಕೇರಳ ಹಾಗೂ ಇತರ ರಾಜ್ಯಗಳಲ್ಲೂ ಸೋಂಕು ಹರಡುತ್ತಿದೆ. ಪ್ರಸ್ತುತ ಸಂದರ್ಭದಲ್ಲಿ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಕಾಳಜಿ ವಹಿಸಬೇಕು ಎಂದು

# ಯುವನಿಧಿ ನೋಂದಣಿಗೆ ಡಿ.26ಕ್ಕೆ ಚಾಲನೆ

ಬೆಂಗಳೂರು: ರಾಜ್ಯ ಕಾಂಗ್ರೆಸ್ ಸರ್ಕಾರದ ಉಚಿತ ಗ್ಯಾರಂಟಿ ಯೋಜನೆಗಳಲ್ಲಿ ಕೊನೆಯದಾದ 'ಯುವನಿಧಿ' ನಿರುದ್ಯೋಗ ಭತ್ಯೆ ಯೋಜನೆಯ (Yuva Nidhi Scheme) ನೋಂದಣಿಗೆ ಡಿಸೆಂಬರ್ 26ರಂದು ಚಾಲನೆ ನೀಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಗುರುವಾರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಐದನೇ ಗ್ಯಾರಂಟಿ ಯೋಜನೆಯಾದ ಯುವನಿಧಿ ನೋಂದಣಿ ಪ್ರಕ್ರಿಯೆಗೆ ಡಿಸೆಂಬರ್ 26ರಂದು ವಿಧಾನಸೌಧದಲ್ಲಿ ಸಿಎಂ, ಡಿಸಿಎಂ ಲಾಂಛನ ಅನಾವರಣ ಮಾಡಿ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.


**ಯಾರು ಫಲಾನುಭವಿಗಳು?:** ಜನವರಿ 12 ರಂದು ವಿವೇಕಾನಂದ ಜಯಂತಿ ದಿನ ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿ ಯುವ ಪದವೀಧರರು ಮತ್ತು ಡಿಪ್ಲೊಮಾ ಪದವಿ ಪಡೆದವರ ಖಾತೆಗೆ ಹಣ ವರ್ಗಾವಣೆಯಾಗಲಿದೆ. ಶಿವಮೊಗ್ಗದಲ್ಲಿ ಕಾರ್ಯಕ್ರಮ ನಡೆಯಲಿದೆ. ಪದವಿ, ಡಿಪ್ಲೋಮಾ ಮುಗಿಸಿ ಆರು ತಿಂಗಳಾದ ನಿರುದ್ಯೋಗಿ ಯುವಕ–ಯುವತಿಯರು ಈ ಯೋಜನೆಗೆ ಅರ್ಹರಾಗಿರುತ್ತಾರೆ. ಅರ್ಜಿದಾರರು ಕರ್ನಾಟಕದ ನಿವಾಸಿಗಳಾಗಿರಬೇಕು ಮತ್ತು 2022–23 ಶೈಕ್ಷಣಿಕ ವರ್ಷದಲ್ಲಿ ಪದವಿ ಪಡೆದಿರಬೇಕು. ಸಹಾಯಧನವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗುವುದು ಎಂದರು.

ಡಿಗ್ರಿ ಪಾಸ್ ಆದವರಿಗೆ 3 ಸಾವಿರ, ಡಿಪ್ಲೋಮಾ ತೇರ್ಗಡೆ ಹೊಂದಿದವರಿಗೆ 1,500 ರೂಪಾಯಿಗಳನ್ನು ಎರಡು ವರ್ಷಗಳವರೆಗೆ ನೀಡುತ್ತೇವೆ. ಎರಡು ವರ್ಷದೊಳಗೆ ಕೆಲಸ ಸಿಕ್ಕಿದ ಕೂಡಲೇ ಸರ್ಕಾರದ ಯುವನಿಧಿ ಸವಲತ್ತು ನಿಲ್ಲುತ್ತದೆ ಎಂದು ವಿವರಿಸಿದರು. ತಪ್ಪು ಮಾಹಿತಿ ನೀಡಿ ಹಣ ಪಡೆದರೆ ಕ್ರಮ:ಯುವನಿಧಿ ಫಲಾನುಭವಿಗಳು ಕೆಲಸ ದೊರೆತಿದೆಯೋ ಇಲ್ಲವೋ ಎಂಬುದನ್ನು ಪ್ರತಿ ತಿಂಗಳು ಸ್ವಯಂ ಘೋಷಣೆ ಮಾಡಬೇಕು. ಇದನ್ನು ಶೇ 100 ರಷ್ಟು ನಾವು ನೇರವಾಗಿ ಹುಡುಕಲು ಸಾಧ್ಯವಿಲ್ಲ. ಸಾಕಷ್ಟು ಚಾಲೆಂಜ್ ಇದೆ, ನೋಡೋಣ. ಕೆಲಸ ಸಿಕ್ಕಿದವರು ಯುವನಿಧಿ ಪಡೆದುಕೊಂಡರೆ, ಆ ಹಣವನ್ನು ವಾಪಸ್ ಪಡೆಯುತ್ತೇವೆ. ಅಂಥವರ ವಿರುದ್ಧ ಕಾನೂನು ಕ್ರಮಗಳನ್ನು ತೆಗೆದುಕೊಳ್ಳುತ್ತೇವೆ ಎಂದು ಸಹ ಎಚ್ಚರಿಕೆ ನೀಡಿದರು. ಅರ್ಜಿ ಸಲ್ಲಿಸುವುದು ಹೇಗೆ?: ಯುವನಿಧಿ ಯೋಜನೆಗೆ ರಾಜ್ಯದ 10 ಲಕ್ಷಕ್ಕೂ ಹೆಚ್ಚು ಪದವೀಧರರು ಅರ್ಹರಾಗಿದ್ದು, ಇದಕ್ಕೆ ಸರ್ಕಾರ ಸುಮಾರು 250 ರೂಪಾಯಿ ನಿಗದಿಪಡಿಸಿದೆ. ಮುಂದಿನ ವರ್ಷ 1,250 ಕೋಟಿ ಬಜೆಟ್ ಅವಶ್ಯಕತೆ ಇದೆ. ಪತ್ರಿ ತಿಂಗಳು 25 ರೊಳಗೆ ಅರ್ಹರು ಅರ್ಜಿ ಸಲ್ಲಿಸಲು ಅವಕಾಶ ಇದೆ. ಸೇವಾ ಸಿಂಧುವಿನಲ್ಲಿ ಅರ್ಜಿ ಸಲ್ಲಿಸಬಹುದು.

# ಚುನಾವಣಾ ಪ್ರಚಾರ ವೆಚ್ಚ: ದರಗಳ ನಿಗದಿ : ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಮುಂಬರುವ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಚುನಾವಣಾ ಪ್ರಚಾರಕ್ಕೆ ತಗಲುವ ಖರ್ಚು–ವೆಚ್ಚಗಳನ್ನು ಲೆಕ್ಕಾಚಾರ ಮಾಡಲು ಅನುಕೂಲವಾಗುವಂತೆ ವಿವಿಧ ಸೇವೆಗಳಿಗೆ ನಿಗದಿಪಡಿಸಲಾದ ಮಾರುಕಟ್ಟೆ ದರಗಳನ್ನು ಆಧರಿಸಿಯೇ ವೆಚ್ಚವನ್ನು ಲೆಕ್ಕ ಮಾಡಲಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಎಸ್.ಆರ್. ದರ ನಿಗದಿಪಡಿಸುವ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ(ಡಿ.21) ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಎಸ್.ಆರ್. ದರಗಳನ್ನು ಆರು ತಿಂಗಳ ಹಿಂದೆಯೇ ನಡೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ನಿಗದಿಪಡಿಸಲಾಗಿರುತ್ತದೆ. ಆದಾಗ್ಯೂ ಪ್ರಸ್ತುತ ಮಾರುಕಟ್ಟೆ ದರಗಳು ಮತ್ತು ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಲಹೆಗಳನ್ನು ಆಧರಿಸಿ ದರಗಳಲ್ಲಿ ಅಗತ್ಯ ಪರಿಷ್ಕರಣೆ ಮಾಡಲಾಗುವುದು ಎಂದು ಹೇಳಿದರು. ಚುನಾವಣಾ ಪ್ರಚಾರ ಸಂದರ್ಭದಲ್ಲಿ ಬಳಕೆ ಮಾಡುವ ಹೂವುಗಳ ದರವನ್ನು ಕಡಿಮೆಗೊಳಿಸಬೇಕು ಎಂದು ಸಭೆಯಲ್ಲಿ ಉಪಸ್ಥಿತರಿದ್ದ ಪ್ರತಿನಿಧಿಗಳು ಸಲಹೆ ನೀಡಿದರು. ನಗರದಲ್ಲಿರುವ ಪುಷ್ಪ ಹರಾಜು ಕೇಂದ್ರದಿಂದ ಸಗಟು ಮಾರುಕಟ್ಟೆ ದರಗಳನ್ನು ಪಡೆದುಕೊಂಡು ದರಗಳನ್ನು ಪರಿಷ್ಕರಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು. ಇನ್ನೂ ಸಾಕಷ್ಟು ಕಾಲವಕಾಶ ಇರುವುದರಿಂದ ದರ ಪರಿಷ್ಕರಣೆ ಹಾಗೂ ಹೊಸ ಸಾಮಗ್ರಿಅಥವಾ ಸೇವೆಗಳ ಸೇರ್ಪಡೆಯನ್ನು ಮಾಡಲಾಗುತ್ತದೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳು ತಮ್ಮ ಸಲಹೆ–ಅಭಿಪ್ರಾಯಗಳನ್ನು ತಿಳಿಸಬೇಕು ಎಂದು ಹೇಳಿದರು.



**ಮತದಾರರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ:** 2024 ಜನವರಿ 1 ರಂದು ಮತದಾರರ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗುವುದು. ಅಲ್ಲಿಯವರೆಗೂ ಚುನಾವಣಾ ಆಯೋಗದ ಮಾರ್ಗಸೂಚಿ ಮತ್ತು ನಿರ್ದೇಶನದ ಪ್ರಕಾರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

27 ಅಕ್ಟೋಬರ್ ನಿಂದ ಡಿಸೆಂಬರ್ 9 ರವರೆಗಿನ ಅವಧಿಯಲ್ಲಿ ಕೈಗೊಳ್ಳಲಾಗಿರುವ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮಾಹಿತಿಯನ್ನು ಒದಗಿಸಲಾಯಿತು.

ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರುಗಳ ಸೇರ್ಪಡೆ, ತೆಗೆದುಹಾಕುವಿಕೆ, ತಿದ್ದುಪಡಿ ಮತ್ತಿತರ ಪರಿಷ್ಕರಣೆ ಒಳಗೊಂಡ ಮತದಾರರ ಪಟ್ಟಿಯನ್ನು ನೀಡಲಾಯಿತು. ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಜಿಲ್ಲಾ ಪಂಚಾಯತಿ ಮುಖ್ಯ ಲೆಕ್ಕಾಧಿಕಾರಿ ಪರಶುರಾಮ್ ದುಡಗುಂಟಿ, ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಜಂಟಿ ನಿರ್ದೇಶಕರಾದ ಶ್ರೀಶೈಲ್ ಕಂಕಣವಾಡಿ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ರೇಷ್ಮಾ ತಾಳಿಕೋಟೆ, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಗಡಿಯಲ್ಲಿ ಹೈ ಅಲರ್ಟ; ಮಹಾರಾಷ್ಟ್ರದಿಂದ ಬರುವವರಿಗೆ ಆರ್‌ಟಿಪಿಸಿಆರ್ ಟೆಸ್ಟ್ ಕಡ್ಡಾಯ

ಬೆಳಗಾವಿ: ಕರ್ನಾಟಕದಲ್ಲಿ ಮತ್ತೆ ಕೊರೋನಾ ಆತಂಕ ಶುರುವಾಗಿದ್ದು, ಆರೋಗ್ಯ ಇಲಾಖೆ ಹೈಅಲರ್ಟ್ ಆಗಿದೆ. ಇನ್ನು ಗಡಿ ಜಿಲ್ಲೆ ಬೆಳಗಾವಿಯಲ್ಲೂ ಸಹ ಕಟ್ಟುನಿಟ್ಟಿನ ಕ್ರಮಕ್ಕೆ ಇಲ್ಲಿನ ಅಧಿಕಾರಿಗಳು ಮುಂದಾಗಿದ್ದಾರೆ.



ಈ ಬಗ್ಗೆ ಇಂದು ಚಿಕ್ಕೋಡಿ ಉಪ ವಿಭಾಗಾಧಿಕಾರಿ ಕಚೇರಿಯಲ್ಲಿ ಶಾಸಕ ಗಣೇಶ್ ಹುಕ್ಕೇರಿ ನೇತೃತ್ವದಲ್ಲಿ ಕೋವಿಡ್ ಸಭೆ ನಡೆದಿದ್ದು. ನೆಗಡಿ, ಕೆಮ್ಮು, ಜ್ವರದ ಲಕ್ಷಣ ಇದ್ದವರಿಗೆ ಆರ್ಟಿಪಿಸಿಆರ್ ಟೆಸ್ಟ್ ಕಡ್ಡಾಯ ಹಾಗೂ ಕೇರಳದ ಶಬರಿಮಲೆಗೆ ತೆರಳಿದವರಿಗೂ ಕಡ್ಡಾಯವಾಗಿ ತಪಾಸಣೆ ಮಾಡುವಂತೆ ಸೂಚನೆ ನೀಡಿದ್ದಾರೆ.

ಮಹಾರಾಷ್ಟ್ರ, ಕರ್ನಾಟಕ ಗಡಿಯಲ್ಲಿ ಹೆಚ್ಚಿನ ನಿಗಾ ವಹಿಸುವ ಕುರಿತು ಚರ್ಚೆ ನಡೆದಿದ್ದು, ಡಿಸೆಂಬರ್ 23ರಿಂದ ಪ್ರತಿ ತಾಲೂಕಿನಲ್ಲಿ 5 ಸಾವಿರ ಕೋವಿಡ್ ತಪಾಸಣೆಗೆ ಸೂಚನೆ ನೀಡಲಾಗಿದೆ. ಪಿಹೆಚ್ಸಿ, ಸಿಹೆಚ್ಸಿ ತಾಲೂಕು ಆಸ್ಪತ್ರೆಯಲ್ಲಿ RTPCR ಟೆಸ್ಟ್‌ಗೆ ನಿರ್ಧರಿಸಲಾಗಿದೆ.

ಮಹಾರಾಷ್ಟ್ರದಿಂದ ಬರುವವರ ಮೇಲೆ ಕೋವಿಡ್ ತಪಾಸಣೆಗೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಹಾಗೇ ನೆಗಡಿ, ಕೆಮ್ಮು, ಜ್ವರದ ಲಕ್ಷಣ ಇದ್ದವರಿಗೆ ಆರ್ಟಿಪಿಸಿಆರ್ ಟೆಸ್ಟ್ ಕಡ್ಡಾಯ ಮಾಡಲಾಗಿದ್ದು, ಕೇರಳದ ಶಬರಿಮಲೆಗೆ ತೆರಳಿದವರಿಗೂ ಕಡ್ಡಾಯ ತಪಾಸಣೆಗೆ ಸೂಚಿಸಲಾಗಿದೆ. ಅಲ್ಲದೇ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಆಕ್ಸಿಜನ್ ಬೆಡ್ ಇರಿಸಬೇಕೆಂದು ಶಾಸಕ ಗಣೇಶ್ ಹುಕ್ಕೇರಿ ಸೂಚನೆ ನೀಡಿದ್ದಾರೆ. ಈ ಸಭೆಯಲ್ಲಿ ತಾಲೂಕು ಕಂದಾಯ ಇಲಾಖೆ, ಪೊಲೀಸ್, ಆರೋಗ್ಯ ಇಲಾಖೆ ಹಾಗೂ ಸ್ಥಳಿಯ ಸಂಸ್ಥೆಗಳ ಅಧಿಕಾರಿಗಳು ಭಾಗಿಯಾಗಿದ್ದರು.

# ಅಥರ್ವ ಆಸ್ಪತ್ರೆ ನೂತನ ಕಟ್ಟಡ ಉದ್ಘಾಟನೆ

ಗೋಕಾಕ: ಈ ಆಸ್ಪತ್ರೆಯಲ್ಲಿ ಕೆಲಸ ಮಾಡುವ ವೈದ್ಯರು ರೋಗಿಗಳನ್ನು ತಮ್ಮ ಬಂಧುಗಳಂತೆ, ಸಹೋದರರಂತೆ ಕಂಡು ಔಷಧೋಪಚಾರ ಮಾಡಬೇಕು. ಆಗ ಆಸ್ಪತ್ರೆ ನಿರ್ಮಿಸಿದ್ದಕ್ಕೆ ಸಾರ್ಥಕವಾಗುತ್ತದೆ ಎಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು. ನಗರದಲ್ಲಿರುವ ಡಾ. ಬೀರನಗಡ್ಡಿ ಅವರ ಅಥರ್ವ ಆಸ್ಪತ್ರೆಯ ನೂತನ ಕಟ್ಟಡದ ವಾಸ್ತು ಶಾಂತಿ ಹಾಗೂ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿ, ಇಂದು ಆಸ್ಪತ್ರೆಗಳು ಜನರ ಆರೋಗ್ಯ ರಕ್ಷಣೆಯ ಕೇಂದ್ರಗಳಾಗಿದ್ದು, ಅದರಲ್ಲೂ ಡಾ.ಬೀರನಗಡ್ಡಿ ಅವರ ಅಥರ್ವ ಆರ್ಥೋ ಮತ್ತು ಟ್ರಾಮಾ ಕೇರ್ ಹಾಗೂ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಾಗಿದೆ ಎಂದರು.



ನಂತರ ಡಾ. ಬೀರನಗಡ್ಡಿ ಅವರ ಅಥರ್ವ ಆಸ್ಪತ್ರೆಯ ಕಟ್ಟಡ ಹಾಗೂ ಅತ್ಯಾಧುನಿಕ ವೈದ್ಯಕೀಯ ಯಂತ್ರೋಪಕರಣ ಸೂಕ್ಷತೆಗಳ ವ್ಯವಸ್ಥೆ ಕುರಿತು ಪರಿಶೀಲಿಸಿದರು. ಇದೇ ಸಂದರ್ಭದಲ್ಲಿ ಯುವ ನಾಯಕ ರಾಹುಲ್ ಜಾರಕಿಹೊಳಿ ಹಾಗೂ ಕಾಂಗ್ರೆಸ್ ಮುಖಂಡ ಅಶೋಕ್ ಪೂಜಾರಿ ಅವರನ್ನು ಅಥರ್ವ ಆಸ್ಪತ್ರೆಯ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕರಾದ ಪಾಂಡು ಮನ್ನಿಕೇರಿ, ಕಾಂಗ್ರೆಸ್ ಮುಖಂಡರಾದ ಅಶೋಕ್ ಪೂಜಾರಿ, ಡಾ. ಮಲ್ಲಿಕಾರ್ಜುನ ಬಿರಣಗಡ್ಡಿ, ಡಾ.ಕೀರ್ತಿ ಬೀರಣಗಡ್ಡಿ, ವಕೀಲರಾದ ರಮೇಶ್ ಬೀರಣಗಡ್ಡಿ. ಮುಖಂಡರಾದ ಕಲ್ಲಪ್ಪಾ ಗೌಡ ಲಕ್ಕಾರ, ಆರೀಫ್ ಪಿರಜಾದೆ, ರಮೇಶ್ ಬಿಲಕುಂದಿ ಹಾಗೂ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಸಹಾಯಧನಕ್ಕಾಗಿ ಅರ್ಜಿ ಅಹ್ವಾನ

ಬೆಳಗಾವಿ: 2023–2024 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಅನುದಾನದಡಿ ವಿವಿಧ ಸೌಲಭ್ಯಗಳಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಸೌಲಭ್ಯಗಳು** ಪರಿಶಿಷ್ಟಜಾತಿ (ಖಅಕ) (ಶೇ24.10)ಪರಿಶಿಷ್ಟಜಾತಿ ಜನರಿಗೆ ಹೊಲಿಗೆ ಯಂತ್ರಗಳನ್ನು ಪೂರೈಸುವುದು, ಪರಿಶಿಷ್ಟಜಾತಿ ಜನರಿಗೆ ವೈದ್ಯಕೀಯ ವೆಚ್ಚ ಭರಿಸುವುದು, ಪರಿಶಿಷ್ಟಪಂಗಡ(ಖಖಖಕ) (ಶೇ24.10),ಪರಿಶಿಷ್ಟಪಂಗಡ ಜನರಿಗೆ ವೈದ್ಯಕೀಯ ವೆಚ್ಚ ಭರಿಸುವುದು,ಇತರೆ ಬಡಜನರ ಕಲ್ಯಣ(ಶೇ7.25),ಇತರೆ ಬಡಜನರ ವರ್ಗದ ಮಹಿಳಾ ಫಲಾನಿಭವಿಗಳಿಗೆ ಸ್ವಯಂ ಉದ್ಯೋಗ ಮಾಡುವ "ಹೊಲಿಗೆ ಯಂತ್ರ ಖರೀದಿ" ಪೂರೈಸುವುದು, ವಿಕಲಚೇತನರ ಕಲ್ಯಾಣ(ಶೇ5), ವಿಕಲಚೇತನರಿಗೆ ತ್ರಿಚಕ್ರ ವಾಹನ ಪೂರೈಸಲಾಗುವುದು. ಎಲ್ಲ ವೈಯಕ್ತಿಕ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನಿದಲಾಗಿದ್ದು, ಅರ್ಹ ಫಲಾನುಭವಿಗಳು ಜ. 8,2023 ರ ಒಳಗಾಗಿ ಪಟ್ಟಣ ಪಂಚಾಯತಿ ಯರಗಟ್ಟಿ ಇಲ್ಲಿಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಯರಗಟ್ಟಿ ಪಟ್ಟಣ ಪಂಚಾಯತಿ ಕಾರ್ಯಲಯದಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು ಹಾಗೂ ನಿಗಧಿತ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು ಒಂದುವೇಳೆ ಅವಧಿಮೀರಿ ಬಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ ಯೋಜನೆಗಳಲ್ಲಿ ಸೌಲಬ್ಯ ಪಡೆದ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅನರ್ಹರಾಗಿರುತ್ತಾರೆ ಅರ್ಜಿಗೆ ಲಗತ್ತಿಸಬೆಕಾದ ಧಾಖಲೆಗಳ ಬಗ್ಗೆ ಪಟ್ಟಣ ಪಂಚಾಯತ ಕಛೇರಿ ನೋಟಿಸ ಬೋರ್ಡನಲ್ಲಿ ವಿವರವಾಗಿ ನಮೂದಿಸಲಾಗಿದ್ದು ಎಂದು ಯರಗಟ್ಟಿ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ–ಶ್ರಮ ಪೋರ್ಟಲ್‌ನಲ್ಲಿ ಅಸಂಘಟಿತ ಕಾರ್ಮಿಕರುನ್ನು ನೋಂದಾಯಿಸಲು ಸೂಚನೆ

ಬೆಳಗಾವಿ: ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲು ಇ–ಶ್ರಮ ಪೋರ್ಟಲ್‌ನ್ನು ಅಭಿವೃದ್ಧಿಪಡಿಸಿದ್ದು, ಈ ಪೋರ್ಟಲ್‌ನಲ್ಲಿ ಅಸಂಘಟಿತ ನೇಕಾರ ಕಾರ್ಮಿಕರನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು. ಸುಮಾರು 379 ಅಸಂಘಟಿತ ವರ್ಗಗಳ ಕಾರ್ಮಿಕರು ಈ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡು ನೋಂದಾಯಿತರು ಸ್ಥಳದಲ್ಲಿಯೇ ಗುರಡುತಿನಡತಿ ಚೀಟಿಯನ್ನು ಪಡೆಯಬಹುದಾಗಿದೆ.

ಜಿಲ್ಲೆಯಲ್ಲಿನ ಎಲ್ಲ ಅಸಂಘಟಿತ ನೇಕಾರ ಕಾರ್ಮಿಕರು ಕಡ್ಡಾಯವಾಗಿ ಇ–ಶ್ರಮ್ ಪೋರ್ಟಲ್ (https://eshram.gov.in/) ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಇದರ ಸೌಲಭ್ಯವನ್ನು ಸದುಪಯೋಗಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕೇಂದ್ರ ಸರ್ಕಾರದ ಇ–ಶ್ರಮ್ ಪೋರ್ಟಲ್ https://eshram.gov.in/ ಗೆ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದಾಗಿದೆ ಹಾಗೂ ಈ ಕಛೇರಿ ದೂರವಾಣಿ ಸಂಖ್ಯೆ : 0831–2950674 ಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಬೆಳಗಾವಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರಿಗೆ ವ್ಯವಸ್ಥೆಯಲ್ಲಿ ವ್ಯತ್ಯಯ ಸಾರ್ವಜನಿಕರು ಸಹಕರಿಸುವಂತೆ ಕೋರಿಕೆ

ಬೆಳಗಾವಿ: ಚಿಕ್ಕೋಡಿ ವಿಭಾಗದಿಂದ ಆಂಜನಾದ್ರಿ ಬೆಟ್ಟಕ್ಕೆ 43 ವಾಹನಗಳು ಹಾಗೂ ಶಾಲಾ ಶೈಕ್ಷಣಿಕ ಪ್ರವಾಸಕ್ಕಾಗಿ 47 ವಾಹನಗಳು ಹೀಗೆ ಒಟ್ಟು 90 ವಾಹನಗಳು ದಿ:23–12–2023 ರಿಂದ ದಿ:24–12–2023 ರ ವರೆಗೆ ವಿವಿಧ ಘಟಕಗಳಿಂದ ಸಾಂದರ್ಭಿಕ ಒಪ್ಪಂದದ ಮೇಲೆ ನೀಡಲಾಗುತ್ತಿದ್ದು, ಈ ಕಾರಣದಿಂದಾಗಿ ವಿಭಾಗದಲ್ಲಿ ವಾಹನಗಳ ಕೊರತೆಯಾಗುವುದರಿಂದ ಎರಡು ದಿನಗಳ ಕಾಲ ಸಾರಿಗೆ ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇರುತ್ತದೆ. ಆದ್ದರಿಂದ ಸಾರ್ವಜನಿಕ ಪ್ರಯಾಣಿಕರು ಸಹಕರಿಸುವಂತೆ ಪ್ರಕಟಣೆಯಲ್ಲಿ ಕೋರಲಾಗಿದೆ.

# ರಕ್ತದಾನ ಮಾಡುವ ಮೂಲಕ ಅತಿಥಿ ಉಪನ್ಯಾಸಕರ ವಿನೂತನ ಪ್ರತಿಭಟನೆ

ಬೆಳಗಾವಿ: ಸೇವಾ ಖಾಯಮಾತಿಗಾಗಿ ಒತ್ತಾಯಿಸಿ ಚಿಕ್ಕೋಡಿಯಲ್ಲಿ ಕಳೆದ 28 ದಿನಗಳಿಂದ ಅತಿಥಿ ಉಪನ್ಯಾಸಕರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಮುಂದುವರಿದಿದ್ದು, ಸರ್ಕಾರ ಗಮನ ಸೆಳೆಯಲು ರಕ್ತದಾನ ಮಾಡಿ ವಿನೂತನವಾಗಿ ಪ್ರತಿಭಟನೆ ನಡೆಸಿದರು. ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಾದ್ಯಂತ ಕಳೆದ ಒಂದು ತಿಂಗಳಿನಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಅತಿಥಿ ಉಪನ್ಯಾಸಕರು ತರಗತಿ ಬಹಿಷ್ಕರಿಸಿ ಆಯಾ ತಾಲೂಕು ತಹಶೀಲ್ದಾರ್ ಕಚೇರಿ ಆವರಣದಲ್ಲಿ ಧರಣಿ ಸತ್ಯಾಗ್ರಹ ನಡೆಸುತ್ತಿದ್ದಾರೆ.

ರಾಜ್ಯಾದ್ಯಂತ 14 ಸಾವಿರ ಅತಿಥಿ ಉಪನ್ಯಾಸಕರು ಪ್ರತಿಭಟನೆ ನಡೆಸುತ್ತಿದ್ದಾರೆ. ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶಿಕ್ಷಕರಿಲ್ಲದೆ




ಕಾಲೇಜುಗಳು ಬಿಕೋ ಎನ್ನುತ್ತಿವೆ. ಯಾವುದೇ ತರಗತಿಗಳು ನಡೆಯುತಿಲ್ಲ. ಇದರಿಂದ ವಿದ್ಯಾರ್ಥಿಗಳ ಶಿಕ್ಷಣ ಜೊತೆ ಸರ್ಕಾರ ಚೆಲ್ಲಾಟ ಆಡುತ್ತಿದೆ ಎಂದು ವಿದ್ಯಾರ್ಥಿಗಳ ಪೋಷಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅತಿಥಿ ಉಪನ್ಯಾಸಕ ಪರಸಪ್ಪ ಪೂಜಾರಿ ಮಾತನಾಡಿ, ನಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕಳೆದ ಒಂದು ತಿಂಗಳಿನಿಂದ ಪ್ರತಿಭಟನೆ ನಡೆಸುತ್ತಿದ್ದೇವೆ. ಸರ್ಕಾರ ಗಮನ ಸೆಳೆಯಲು ಹಲವಾರು ರೀತಿಯಲ್ಲಿ ಪ್ರತಿಭಟನೆ ನಡೆಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಸರ್ಕಾರ ನಮ್ಮ ರಕ್ತವನ್ನು ಜಿಗಣೆ ತರ ಹೀರುತ್ತಿದೆ. ಇದರಿಂದ ಬೇರೆಯವರಿಗೆ ಅನುಕೂಲವಾಗಲೆಂದು ನಾವು ರಕ್ತದಾನ ಮಾಡುತ್ತಿದ್ದೇವೆ ಎಂದರು.

ಕಳೆದ 20 ವರ್ಷಗಳಿಂದ ನಮ್ಮ ಬೇಡಿಕೆಗಳಿಗೆ ಸರ್ಕಾರ ಮನ್ನಣೆ ನೀಡಿಲ್ಲ.

ನಾವು ಮಾನಸಿಕವಾಗಿ ದೈಹಿಕವಾಗಿ ತುಂಬಾ ಬೆಂದು ನೊಂದು ಹೋಗಿದ್ದೇವೆ. ವಿದ್ಯಾರ್ಥಿಗಳ ಜೀವನ ಬೆಳಗಿಸಿದರೂ ಸರ್ಕಾರ ನಮಗೆ ಸೇವಾ ಭದ್ರತೆ ನೀಡುತ್ತಿಲ್ಲ. ನಾವು ಜೀವ ಪಣಕ್ಕಿಟ್ಟು ಹೋರಾಟ ಮಾಡುತ್ತಿದ್ದೇವೆ ಎಂದು ಹೇಳಿದರು.

# ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಶಿಕ್ಷಕರು ಮಾದರಿಯಾಗಿ

ಘಟಪ್ರಭಾ: ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಶಿಕ್ಷಕರು ಮಾದರಿಯಾಗಬೇಕು ಎಂದು ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಗಜಾನನ ಮನ್ನಿಕೇರಿ ಹೇಳಿದರು.

ಅವರು ಸಮೀಪಿದ ಶಿಂದಿಕುರಬೇಟ ಗ್ರಾಮದ ಸರ್ಕಾರಿ ಕನ್ನಡ ಹಿರಿಯ ಹೆಣ್ಣು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಗಜಾನನ ಮನ್ನಿಕೇರಿ ಮತ್ತು ರಾಷ್ಟ್ರ ಪ್ರಶಸ್ತಿ ಸಂಸ್ಕೃತಿ ಮೂಡಲಗಿ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಅಜೀತ ಮನ್ನಿಕೇರಿ ಅವರುಗಳಿಗೆ ಸಮೂಹ ಸಂಪನ್ಮೂಲ ಕೇಂದ್ರ ಶಿಂದಿಕುರಬೇಟ ವ್ಯಾಪ್ತಿಯಲ್ಲಿ ಬರುವ ಎಲ್ಲ ಶಾಲೆಗಳಿಂದ ಹಮ್ಮಿಕೊಂಡ ಸತ್ಕಾರ ಮತ್ತು ಅಭಿನಂದನಾ ಸಮಾರಂಭದಲ್ಲಿ ಸತ್ಕಾರ ಸ್ವೀಕರಿಸಿ ಮಾತನಾಡಿದರು.



ಶೈಕ್ಷಣಿಕವಾಗಿ ಶಾಸಕರಾದ ಬಾಲಚಂದ್ರ ಜಾರಕಿಹೊಳಿ ಮತ್ತು ರಮೇಶ ಜಾರಕಿಹೊಳಿ ಅವರು ಸರ್ಕಾರದ ಅನುದಾನದ ಅಡಿಯಲ್ಲಿ ಹಲವಾರು ಯೋಜನೆಗಳನ್ನು ಜಾರಿ ಮಾಡಿ ಗ್ರಾಮೀಣ ಪ್ರದೇಶದ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸಹಕಾರ ನೀಡಿದ್ದಾರೆ. ಶಿಂದಿಕುರಬೇಟ ಗ್ರಾಮವು ಶೈಕ್ಷಣಿಕವಾಗಿ ಪ್ರಗತಿಯತ್ತ ಸಾಗುತ್ತಿದೆ ಇದಕ್ಕೆ ಗ್ರಾಮಸ್ಥರ ಮತ್ತು ಶಿಕ್ಷಕರ ಸಹಕಾರ ಮುಖ್ಯವಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಅವರನ್ನು ಸಮಾಜದಲ್ಲಿ ಉತ್ತಮ ನಾಗರೀಕರನ್ನಾಗಿ ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದರು. ಮೂಡಲಗಿ ಬಿಇಒ ಅಜೀತ ಮನ್ನಿಕೇರಿ ಮಾತನಾಡಿ ಮೂಡಲಗಿ ಶೈಕ್ಷಣಿಕ ವಲಯಕ್ಕೆ ರಾಷ್ಟ್ರ ಮಟ್ಟದ ಪ್ರಶಸ್ತಿ ದೊರೆತಿರುವುದು ಶಿಕ್ಷಕರು ಮಾಡಿರುವ ಕಾರ್ಯ ಮಹತ್ವದ್ದಾಗಿದೆ. ಈ ಭಾಗದ ಶಾಸಕರಾದ ರಮೇಶ ಜಾರಕಿಹೊಳಿ ಮತ್ತು ಬಾಲಚಂದ್ರ ಜಾರಕಿಹೊಳಿ ಅವರು ಶಿಕ್ಷಣಕ್ಕೆ ಹೆಚ್ಚಿನ ಕಾಳಜಿ ವಹಿಸಿ ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸುತ್ತಾ ಬಂದಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಶಿಕ್ಷಣ ಪ್ರಗತಿಗಾಗಿ ಉತ್ತಮ ಕೆಲಸ ಮಾಡೋಣ ಎಂದರು.

ವೇದಿಕೆ ಮೇಲೆ ಎಸ್ಡಿಎಂಸಿ ಅಧ್ಯಕ್ಷರುಗಳಾದ ದಯಾನಂದ ಕಳಸನ್ನವರ, ಶ್ರೀಧರ ಕಂಬಾರ, ಜ್ಯೋತೇಪ್ಪ ಬಂತಿ ಮುಖಂಡರಾದ ಹಾಲಪ್ಪ ಕರಿಗಾರ, ಶೇಖರ ಮಾನೆ, ಬಸವರಾಜ ಗೋಕಾಕ, ನಿವೃತ್ತ ಪ್ರೀನ್ಸಿಪಾಲ ಎಸ್.ಆರ್.ಭಾವಿಮನಿ, ಎಸ್.ಆರ್.ಬಡಿಗೇರ, ಪಿ.ಎಚ್. ಗೋಸಬಾಳ, ಎಸ್.ಡಿ.ಹಂಚಿನಾಳ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸಮೂಹ ಸಂಪನ್ಮೂಲ ಕೇಂದ್ರ ಶಿಂದಿಕುರಬೇಟ ವ್ಯಾಪ್ತಿಯ ಎಲ್ಲ ಪ್ರಧಾನಗುರುಗಳು, ಶಿಕ್ಷಕರು, ಎಸ್ ಡಿಎಂಸಿ ಅಧ್ಯಕ್ಷರು,ಸದಸ್ಯರ ವತಿಯಿಂದ ಅಭಿನಂದನಾ ಸಮಾರಂಭದಲ್ಲಿ ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಗಜಾನನ ಮನ್ನಿಕೇರಿ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಮೂಡಲಗಿ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಅಜೀತ ಮನ್ನಿಕೇರಿ ಅವರುಗಳಿಗೆ ಸತ್ಕರಿಸಿದರು. ಎಸ್.ಬಿ.ಪಾಟೀಲ ಸ್ವಾಗತಿಸಿದರು. ಕೆ.ಎಚ್.ತುಳಸಿಗೇರಿ ನಿರೂಪಿಸಿದರು. ಎಸ್.ಡಿ.ಹಂಚಿನಾಳ ವಂದಿಸಿದರು.


# ಕ್ರಿಸ್‌ಮಸ್ ಹಬ್ಬದ ನಿಮಿತ್ಯ ಹೆಚ್ಚುವರಿ ಸಾರಿಗೆ ವ್ಯವಸ್ಥೆ

ಬೆಳಗಾವಿ: 2023 ನೇ ಸಾಲಿನ ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 130 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಡಿಸೆಂಬರ್ 23, 2023 ನಾಲ್ಕನೇ ಶನಿವಾರ, ಡಿ.24 ಭಾನುವಾರ ಮತ್ತು ಡಿ.25 ಸೋಮವಾರ ಕ್ರಿಸ್‌ಮಸ್ ಹಬ್ಬ ಇರುವದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ದಿನಾಂಕ: 22.12.2023 ರಿಂದ 24.12.2023 ರವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ಮೇಲೆ ಡಿಸೆಂಬರ್ 25, .2023 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು. ಸಾರ್ವಜನಿಕರು ಸದರಿ ವಿಶೇಷ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಮುಖ್ಯ ಸಂಚಾರ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೂ ಪರಿಹಾರ ನೀಡುವಂತೆ ಒತ್ತಾಯಿಸಿ ಮಾಸ್ತಿಹೋಳಿ ಗ್ರಾಮಸ್ಥರಿಂದ ಬೃಹತ್ ಧರಣಿ

ಬೆಳಗಾವಿ: ಹಿಡಕಲ್ ಡ್ಯಾಂ ಹಿನ್ನೀರಿನಿಂದ ಮುಳುಗಡೆಯಾದ ಭೂಮಿಗೆ ಸರ್ಕಾರ ಶೀಘ್ರವೇ ಪರಿಹಾರ ನೀಡುವಂತೆ ಒತ್ತಾಯಿಸಿ ಮಾಸ್ತಿಹೋಳಿ ಗ್ರಾಮದ ನೂರಾರು ರೈತರು ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಿದ್ದಾರೆ. ಇದಕ್ಕೂ , ಮೊದಲು ಇಲ್ಲಿನ ರಾಣಿ ಚನ್ನಮ್ಮ ವೃತ್ತದಿಂದ ಕರ್ನಾಟಕ ನೀರಾವರಿ ನಿಗಮದ ಕಚೇರಿವರೆಗೂ ಪ್ರತಿಭಟನೆ ನಡೆಸಿದ ಮಾಸ್ತಿಹೋಳಿ ರೈತರು ಬಡವರ ನೆರವಿಗೆ ಬಾರದ ಅಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿ ನೀರಾವರಿ ನಿಗಮದ ಮುಖ್ಯ ಅಭಿಯಂತರ ಅಧಿಕಾರಿಗಳಿಗೆ ಹಾಗೂ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಪರಿಹಾರ ಕೊಡಿ ಇಲ್ಲವಾದರೆ ಒಂದು ತೊಟ್ಟು ವಿಷ ಕೊಡಿ ಎಂದು ರೈತರು ಆಕ್ರೋಶ ಹೊರಹಾಕಿದರು. ನೀರಾವರಿ ಕಚೇರಿ ಮುತ್ತಿಗೆ ಹಾಕಿ, ಪರಿಹಾರ ವಿಳಂಬ ಮಾಡುತ್ತಿರುವ ನೀರಾವರಿ ಅಧಿಕಾರಿಗಳ ವಿರುದ್ಧ ಧರಣಿ ಸತ್ಯಾಗ್ರಹ ನಡೆಸಿದರು.

ರೈತರ ಫಲವತ್ತಾದ 394 ಎಕರೆ ಜಮೀನುಗಳು ಹಿಡಕಲ್ ಡ್ಯಾಂ



ಹಿನ್ನೀರಿನಿಂದ ಮುಳುಗಡೆಯಾಗಿದೆ. ಸರ್ಕಾರ ಪರಿಹಾರ ನೀಡಬೇಕು ಎಂದು ಈ ಭಾಗದ ರೈತರು ಕಳೆದ 40 ವರ್ಷಗಳಿಂದ ನಿರಂತರ ಹೋರಾಟ ಮಾಡುತ್ತಿದ್ದಾರೆ. ಅನ್ನದಾತರಿಗೆ ಮೋಸ ಮಾಡುತ್ತಿರುವ 3 ಅಧಿಕಾರಿಗಳನ್ನು ಶೀಘ್ರವೇ ಅಮಾನತು ಮಾಡಬೇಕು ಎಂದು ಆಗ್ರಹಿಸಿದರು. ಬಾಳೇಶ ಮಾವನೂರಿ ಮಾತನಾಡಿ, ಸಂಭಂದ ಪಟ್ಟ ನೀರಾವರಿ ಇಲಾಖೆ ಭೂ ಸ್ವಾಧೀನ ಪ್ರಸ್ತಾವನೆ ಸಲ್ಲಿಸಲು ಕ್ರಮಕೈಗೊಳ್ಳವಂತೆ ಹೈಕೋರ್ಟ ಆದೇಶ ನೀಡಿದೆ. ಮೂರು ತಿಂಗಳಾದರೂ ನೀರಾವರಿ ಇಲಾಖೆಯಿಂದ ಯಾವುದೇ ರೀತಿಯ ಕ್ರಮ ಕೈಗೊಂಡಿಲ್ಲ. ಫಲವತ್ತಾದ 394 ಎಕರೆ ಜಮೀನು ನೀರಲ್ಲಿ ಮುಳಗಿ ಹೋಗಿದೆ ಎಲ್ಲಾ ಸರ್ಕಾರಿಗೆ ಮನವಿ ಸಲ್ಲಿಸಲಾಗಿದೆ. ಆದರೆ, ಕ್ರಮ ಕೈಗೊಂಡಿಲ್ಲ ಮುಖ್ಯಮಂತ್ರಿ ಸಿದ್ಧರಾಮಯ್ಯ, ಡಿಸಿಎಂ ಡಿಕೆಶಿವಕುಮಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಸೂಚನೆ ನೀಡಿದ್ದಾರೆ. ಆದರೆ, ಸಂಭಂದಪಟ್ಟ ಅಧಿಕಾರಿಗಳ ಮಾತ್ರ ನ್ಯಾಯಾಲಯ ಆದೇಶ ಗಾಳಿಗೆ ತೂರಿದ್ದಾರೆ, ವಿನಾಕಾರಣ ಕಾಲಹರಣ ಮಾಡಿ ರೈತರನ್ನು ಕಚೇರಿಗೂ ಅಲೆಸುತ್ತಿದ್ದಾರೆ. ನಿರ್ಲಕ್ಷ್ಯ ತೋರಿದ ಅಧಿಕಾರಿಗಳಾದ ರವೀಂದ್ರ ತಾಳೂರ, ಎಸ್.ಆರ್ . ಕಮತ, ಎಸ್.ಎಂ. ಮಾಡಿವಾಲೆ ಶೀಘ್ರವೇ ಅನಮಾನತು ಮಾಡಬೇಕು ಎಂದು ಒತ್ತಾಯಿಸಿದರು. ಜೀವನ ಉಪಯೋಗಕ್ಕೆ ಮೂಲಾಧಾರ ಜಮೀನು ಮುಳುಗಡೆಯಾಗಿದೆ.

# ಬಸವರಾಜ ಕಟ್ಟೀಮನಿ ಪತ್ರಿಕೋದ್ಯಮ ಪ್ರಶಸ್ತಿ'ಗೆ ಪತ್ರಕರ್ತ ಚಂದ್ರಕಾಂತ ವಡ್ಡು ಆಯ್ಕೆ

ಬೆಳಗಾವಿ: ಬೆಳಗಾವಿಯ ಬಸವರಾಜ ಕಟ್ಟೀಮನಿ ಪ್ರತಿಷ್ಠಾನ'ವು ಕೊಡಮಾಡುವ, 2023 ನೆಯ ಸಾಲಿನ 'ಬಸವರಾಜ ಕಟ್ಟೀಮನಿ ಪತ್ರಿಕೋದ್ಯಮ ಪ್ರಶಸ್ತಿ'ಗೆ ಹೆಸರಾಂತ ಪತ್ರಕರ್ತ ಹಾಗೂ ಪತ್ರಿಕೋದ್ಯೋಗಿ ಶ್ರೀ ಚಂದ್ರಕಾಂತ ವಡ್ಡು ಅವರನ್ನು ಆಯ್ಕೆ ಮಾಡಲಾಗಿದೆ.

'ಬಸವರಾಜ ಕಟ್ಟೀಮನಿ ಪತ್ರಿಕೋದ್ಯಮ ಪ್ರಶಸ್ತಿ'ಯು ಐವತ್ತು ಸಾವಿರ ರೂಪಾಯಿ, ಪ್ರಶಸ್ತಿಪತ್ರ ಹಾಗೂ ಫಲಪುಷ್ಪಗಳನ್ನು ಒಳಗೊಂಡಿರುತ್ತದೆ. ಡಿಸೆಂಬರ್ 18, 2023 ರಂದು, ಬಸವರಾಜ ಕಟ್ಟೀಮನಿ ಪ್ರತಿಷ್ಠಾನದ ಅಧ್ಯಕ್ಷ ಪ್ರೊ. ಮಲ್ಲಿಕಾರ್ಜುನ ಹಿರೇಮಠ ಅವರ ಅಧ್ಯಕ್ಷತೆಯಲ್ಲಿ, ಬೆಳಗಾವಿಯಲ್ಲಿ ನಡೆದ ಸರ್ವಸದಸ್ಯರ ಸಭೆಯಲ್ಲಿ ಶ್ರೀ ಚಂದ್ರಕಾಂತ ವಡ್ಡು ಅವರ ಹೆಸರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದ್ದು, ಈ ಪ್ರಶಸ್ತಿಯನ್ನು 2024ರ ಫೆಬ್ರುವರಿಯಲ್ಲಿ ಶಿವಮೊಗ್ಗದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರದಾನ ಮಾಡಲಾಗುವುದು. ಎಂದು ಬೆಳಗಾವಿಯ ಬಸವರಾಜ ಕಟ್ಟೀಮನಿ ಪ್ರತಿಷ್ಠಾನ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಅಹ್ವಾನ

ಬೆಳಗಾವಿ: ಯರಗಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಗೆ ಒಳಪಡುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದೂಳಿದ ವರ್ಗದವರಿಗೆ ಹಾಗೂ ವಿಕಲಚೇತನರ ಫಲಾನುಭವಿಗಳ ಅಭಿವೃದ್ಧಿಗಾಗಿ ಮುಖ್ಯ ಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ ಹಂತ–4ರ ಶೇ 24.10%, ಶೇ 7.25% ಮತ್ತು 5% ಅನುದಾನದಡಿ ವಿವಿಧ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪ.ಜಾ/ಪ.ಪಂ ಜನಾಂಗದ ಶೇ 24.10%, ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಸಹಾಯಧನ, ಪಕ್ಕಾ ಮನೆ ನಿರ್ಮಾಣಕ್ಕೆ ಸಹಾಯಧನ, ಕಚ್ಚಾ ಮನೆ ಮೇಲ್ಛಾವಣೆ ದುರಸ್ತಿಗೆ ಸಹಾಯಧನ .ಸಣ್ಣ ಉದ್ದಿಮೆ ಆರಂಭಿಸಲು ಬ್ಯಾಂಕ ಸಾಲಕ್ಕೆ ಸಹಾಯಧನ, ಭಾರಿ ಶಸ್ತ್ರ ಚಿಕಿತ್ಸೆಗೆ ಸಹಾಯಧನ, ಎಮ್,ಬಿ,ಬಿ.ಎಸ್/ಬಿ.ಇ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ಖರೀದಿಸುವ ಸಹಾಯಧನ, ಕೌಶಲ್ಯ ಅಭಿವೃದ್ಧಿ ತರಬೇತಿ, ಮನೆಗಳಿಗೆ ಸೋಲಾರ ಲೈಟ ಸಂಪರ್ಕ, ಪ.ಪಂ ನಿವೇಶನ ಖರೀದಿಗೆ ಸಹಾಯಧನ ನಿಡಲಾಗುವುದು. ಇತರೆ ಬಡಜನರ 7.25% ರ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಸಹಾಯಧನ , ನಿವೇಶನ ಖರೀದಿಗೆ ಸಹಾಯಧನ, ಪಕ್ಕಾ ಮನೆ ನಿರ್ಮಾಣಕ್ಕೆ ಸಹಾಯಧನ ಕೋಡಲಾಗುತ್ತದೆ. ವಿಕಲಚೇತನ 5%ರ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ, ನಿವೇಶನ ಖರೀದಿಗೆ ಸಹಾಯಧನ, ಪಕ್ಕಾ ಮನೆ ನಿರ್ಮಾಣಕ್ಕೆ ಸಹಾಯಧನ, ಸಣ್ಣ ಉದ್ದಿಮೆ ಆರಂಭಿಸಲು ಬ್ಯಾಂಕ ಸಾಲಕ್ಕೆ ಸಹಾಯಧನ, ಜೀವ ವಿಮಾ ಕಂತು ಪಾವತಿಗೆ ಸಹಾಯಧನ, ಸದರಿ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ಡಿ. 19 2023 ರಿಂದ ಡಿ.29 2023 ರವರೆಗೆ ಸಂಜೆ 5 ಘಂಟೆಯೊಳಗಾಗಿ ನಿಗದಿತ ನಮೂನೆಯಲ್ಲಿ ಅವಶ್ಯಕ ದಾಖಲಾತಿಗಳೊಂದಿಗೆ ಈ ಕಾರ್ಯಲಯಕ್ಕೆ ಅರ್ಜಿಗಳನ್ನು ಸಲ್ಲಿಸಬಹುದಾಗಿದು ಹಾಗೂ ಅಪೂರ್ಣವಾದ ಅವಧಿ ಮೀರಿ ಬಂದ ಅವಶ್ಯಕ ದಾಖಲಾತಿಗಳಿಲ್ಲದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಕಾರ್ಯಲಯಕ್ಕೆ ಭೇಟಿ ನೀಡಬಹುದು.

# ವಿವಿಧ ಬೇಡಿಕೆ ಈಡೇರಿಕೆಗೆ ಅತಿಥಿ ಉಪನ್ಯಾಸಕರ ಒತ್ತಾಯ




ಬೆಳಗಾವಿ: ಹಲವು ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಅತ್ಯಂತ ಕಡಿಮೆ ಗೌರವ ಭತ್ಯೆ ಪಡೆದು ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ಸರಕಾರ ಪರ್ಯಾಯ ವ್ಯವಸ್ಥೆ ಕಲ್ಪಿಸಿ ಸೇವಾ ಕಾಯಂಮಾತಿ ಮಾಡುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಗುರುವಾರ ರಾಜ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘ ಚನ್ನಮ್ಮ ವೃತ್ತದಿಂದ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಅತಿಥಿ ಉಪನ್ಯಾಸಕರನ್ನು ಸರಕಾರ ಕಾಯಂಮಾತಿ ಮಾಡಿ ಸೇವಾ ವಿಲೀನಗೊಳಿಸುವಾಗ ಕಳೆದ 2009 ಜುಲೈ 11 ರ ಒಳಗೆ ಎಂಪಿಎಲ್ ಪದವಿ ಪಡೆದವರಿಗೆ ಸಕ್ರಮಾತಿ ಸಂದರ್ಭದಲ್ಲಿ ಪರಿಗಣಿಸಬೇಕು. ಈ ಹಿಂದೆ ಸರಕಾರಿ ಕಾಲೇಜುಗಳಲ್ಲಿ ಹಂಗಾಮಿಯಾಗಿ ಕರ್ತವ್ಯ ನಿರ್ವಹಿಸಿದ ಪದನಾಮ ಬದಲಾದ ಸ್ಥಳೀಯ ಅಭ್ಯರ್ಥಿ, ಸ್ಟಾಪ್, ಗ್ಯಾಪ್, ಗುತ್ತಿಗೆ ಆಧಾರಿತ ಅರೆ ಕಾಲಿಕ ಉಪನ್ಯಾಸಕರನ್ನು ಸರಕಾರ ಮಾನವೀಯತೆ ಆಧಾರದ ಮೇಲೆ ಸೂಕ್ತ ಕಾಯ್ದೆ ತಿದ್ದುಪಡಿ ಮಾಡಿ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಜೆಓಸಿ ವಿಭಾಗದಲ್ಲಿ ಸೇವೆ ಸಲ್ಲಿಸಿದವರನ್ನು ಹೇಗೆ ಸೇವಾ ವಿಲೀನ ಮಾಡಲಾಗಿದೆಯೋ ಅದೇ ಮಾದರಿಯಲ್ಲಿ ಅತಿಥಿ ಉಪನ್ಯಾಸಕರ ಸೇವಾ ವಿಲೀನ ಮಾಡಿಕೊಳ್ಳಬೇಕು. ಪೌರಾಡಳಿತ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ದಿನಗೂಲಿ ನೌಕರರನ್ನು ಹಾಗೂ ಗುತ್ತಿಗೆ ಕಾರ್ಮಿಕರನ್ನು ಖಾಯಂ ಮಾಡಿ ಸೇವಾ ವಿಲೀನಗೊಳಿಸಲಾಗಿದೆ. ಕೃಷಿ ಇಲಾಖೆಯಲ್ಲಿ ಆತ್ಮ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ನೌಕರರನ್ನು ಹಿಂದಿನ ಸರಕಾರ ಖಾಯಂ ಮಾಡಲು ಸಮ್ಮತಿ ಸೂಚಿಸಿದೆ. ಆದರೆ ನಮಗೆ ಮಾತ್ರ ಮಾಡಿಲ್ಲ ಎಂದು ಮನವಿಯಲ್ಲಿ ಪ್ರತಿಭಟನಾಕಾರರು ತಿಳಿಸಿದ್ದಾರೆ.

ಪ್ರತಿಭಟನೆಯಲ್ಲಿ ಡಾ. ಅ.ಬ.ಇಟಗಿ, ಪ್ರಕಾಶ ಮಬ್ಬನವರ, ಇರ್ಫಾನ ಶಿಲೇದಾರ, ನೀಲಕಂಠ ಭೊಮನ್ನವರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಜಿಲ್ಲಾಮಕ್ಕಳ ರಕ್ಷಣಾಧಿಕಾರಿ, ಘಟಕದ ಸಿಬ್ಬಂದಿಗಳಿಗೆ ಜಿಲ್ಲಾಧಿಕಾರಿಗಳಿಂದ ಪ್ರಶಂಸೆ



ಬೆಳಗಾವಿ: ಅಂತರಾಷ್ಟ್ರೀಯ ದತ್ತು ಮಾಸಾಚರಣೆ 2023 ಅಂಗವಾಗಿ ಕಾನೂನುಬದ್ದ ದತ್ತು ಕುರಿತು ಜಿಲ್ಲೆಯಲ್ಲಿ ಯಶಸ್ವಿಯಾಗಿ ವಿನೂತನ ಹಾಗೂ ಪರಿಣಾಮಕಾರಿಯಾಗಿ ಅರಿವು ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜಿಸಿದ್ದಕ್ಕಾಗಿ ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಅಭಿನಂದನಾ ಪ್ರಮಾಣ ಪತ್ರ ನೀಡಿದರು.

ಗುರುವಾರ (ಡಿ.21) ರಂದು ಜಿಲ್ಲಾಮಕ್ಕಳ ರಕ್ಷಣಾಧಿಕಾರಿ ಹಾಗೂ ಘಟಕದ ಎಲ್ಲ ಸಿಬ್ಬಂದಿಗಳನ್ನು ಹೃದಯ ಪೂರ್ವಕವಾಗಿ ಜಿಲ್ಲಾಧಿಕಾರಿಗಳು ಅಭಿನಂದಿಸಿ, ಸಂತಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತೇಶ ಭಜಂತ್ರಿ ,ಅಸಾಂಸ್ಥಿಕ ಸೇವೆ ರಕ್ಷಣಾಧಿಕಾರಿಗಳು ಸಚಿನ ಹಿರೇಮಠ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು, ಸರ್ಕಾರಿ ವಿಶೇಷ ದತ್ತು ಸ್ವಿಕಾರ ಕೇಂದ್ರದ ಸಿಬ್ಬಂದಿಗಳು, ಸುಧಾರಣಾ ಸಂಸ್ಥೆ ಅಧಿಕ್ಷಕರು ಹಾಗೂ ಸಿಬ್ಬಂದಿಗಳು ಹಾಜರಿದ್ದರು. ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಜಿಲ್ಲೆಯಲ್ಲಿ ಕಾನೂನು ಬದ್ಧ ದತ್ತು ಪ್ರಕ್ರಿಯೆ ಕುರಿತು ವಿವಿಧ ಅರಿವು ಕಾಯಕ್ರಮಗಳನ್ನು ಆಯೋಜಿಸಿ ಸಾರ್ವಜನಿಕರಿಗೆ, ಎಲ್ಲ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ, ಅಂಗನವಾಡಿ ಕಾರ್ಯಕರ್ತರಿಗೆ, ಅಂಗನವಾಡಿ ಮೇಲ್ವಿಚಾರಕಿಯವರಿಗೆ, ಆಶಾ ಕಾರ್ಯಕರ್ತರಿಗೆ, ಪೋಲಿಸ ಇಲಾಖೆಯ ಅಧಿಕಾರಿಗಳಿಗೆ, ಪ್ರಾಥಮಿಕ, ಸಮುದಾಯ ಆರೋಗ್ಯ ವೈದ್ಯಾಧಿಕಾರಿಗಳಿಗೆ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ, ಮಾದ್ಯಮದವರಿಗೆ, ಕಾನೂನು ಬದ್ದ ದತ್ತು ಪ್ರಕ್ರಿಯೆ ಹಾಗೂ ಪೋಷಕತ್ವ ಯೋಜನೆ ಕುರಿತು ಪರಿಣಾಮಕಾರಿಯಾಗಿ ಅರಿವು ಮೂಡಿಸಲಾಗಿದೆ.

# ಮರಾಠಿ ಪುಂಡರ ಗಡಿಪಾರಿಗೆ ಕರವೇ ಒತ್ತಾಯ

ಘಟಪ್ರಭಾ: ಹುಕ್ಕೇರಿ ತಾಲೂಕಿನ ಅಂಕಲಿ ಗ್ರಾಮದಲ್ಲಿ ಕನ್ನಡಿಗ ಯುವಕನ ಮೇಲೆ ಹಲ್ಲೆ ಮಾಡಿದ ಮರಾಠಿ ಪುಂಡರ ಮೇಲೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕರವೇ ಗೋಕಾಕ ತಾಲೂಕು ಘಟಕ ಅಧ್ಯಕ್ಷ ಹಾಗೂ ಪದಾಧಿಕಾರಿಗಳು ಗುರುವಾರ ಘಟಪ್ರಭಾ ಪೊಲೀಸ್ ಠಾಣೆ ಇನ್ಸ್ಪೆಕ್ಟರ್ ಅವರಿಗೆ ಮನವಿ ಸಲ್ಲಿಸಿದರು.

ಅಂಕಲಿ ಗ್ರಾಮದಲ್ಲಿ ಕಳೆದ ಎರಡು ದಿನಗಳ ಹಿಂದೆ ಕಿಡಿಗೇಡಿಗಳು ಸಂಗೊಳ್ಳಿ ರಾಯಣ್ಣನ ನಾಮಫಲಕ



ಮತ್ತು ಕನ್ನಡ ಧ್ವಜವನ್ನು ಕಿತ್ತು ಹಾಕುವ ಮೂಲಕ ಕನ್ನಡಿಗರನ್ನು ಅವಮಾನಿಸಿದ್ದಾರೆ. ಇದನ್ನು ಪ್ರಶ್ನಿಸಿದ ಕನ್ನಡಿಗ ಯುವಕರ ಮೇಲೆ ಮಾರಣಾಂತಿಕ ಹಲ್ಲೆ ಮಾಡಲಾಗಿದೆ. ಹಾಗಾಗಿ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರನ್ನು ಬಂಧಿಸಿ ಗಡಿಪಾರು ಮಾಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಕರ್ನಾಟಕದಲ್ಲಿ ಕನ್ನಡ ಧ್ವಜ ಅಳವಡಿಸುವುದು ಅಪರಾಧವೇ ಇನ್ನುವರೆಗೂ ಸಂಕೇಶ್ವರ ಪೊಲೀಸರು ಕ್ರಮ ಕೈಗೊಂಡಿಲ್ಲ ಇನ್ನುವರಿಗೂ ನಾಡ ದ್ರೋಹಿಗಳ ಮೇಲೆ ಕ್ರಮ ಕೈಗೊಳ್ಳದಿರುವುದು ಸಂಶಯಕ್ಕೆ ಎಡೆ ಮಾಡಿಕೊಟ್ಟಿದೆ. ನಾಡದ್ರೋಹಿಗಳು ಸಂಕೇಶ್ವರದಲ್ಲಿ ರಾಜರೋಷವಾಗಿ ಅಡ್ಡಾಡುತ್ತಿದ್ದಾರೆ ಇದರಿಂದಾಗಿ ಇನ್ನಷ್ಟು ನಾಡ ದ್ರೋಹಿಗಳಿಗೆ ಉತ್ತೇಜನ ನೀಡಿದಂತಾಗುತ್ತದೆ ಮಾನ್ಯ ಪೊಲೀಸ್ ವರಿಷ್ಠಾಧಿಕಾರಿಗಳು ತಾವು ಕೂಡಲೇ ಯಾವುದೇ ರಾಜಕೀಯ ಒತ್ತಡಕ್ಕೆ ಒಳಪಡದೆ ಕೂಡಲೇ ನಾಡ ದ್ರೋಹಿಗಳ ಮೇಲೆ ಗುಂಡಾ ಕಾಯ್ದೆ ಅಡಿಯಲ್ಲಿ ಅವರನ್ನು ಬಂಧಿಸಿ ಅವರನ್ನು ಕರ್ನಾಟಕದಿಂದ ಗಡಿಪಾರು ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಾನೆಯಲ್ಲಿ ರೆಹಮಾನ್ ಮೋಕಾಶಿ,ರವಿ ನಾವಿ, ಸುನಿಲ್ ಕೊಟಬಾಗಿ,ಆನಂದ ಗಾಡಿವಡ್ಡರ ಯೆಶು ರಾಣಪ್ಪಗೋಳ, ಶಶಿಗೌಡ ಪಾಟೀಲ, ಅಪ್ಪಾಸಾಹೇಬ ಮುಲ್ಲಾ, ಸಿದ್ದಪ್ಪ ಕುರಳಿ, ಸದಸ್ಯರು ಭಾಗವಹಿಸಿದ್ದರು.

## ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಅವಧಿ ವಿಸ್ತರಣೆ

ವಿಜಯಪುರ: ಅಲ್ಪಸಂಖ್ಯಾತ ಸಮುದಾಯದ 1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕಾಗಿ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ : 31-12-2023 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.ಅರ್ಹ ಅಭ್ಯರ್ಥಿಗಳು ಮೆಟ್ರಿಕ್ ಪೂರ್ವ ಆನ್‌ಲೈನ್ ವೆಬ್‌ಸೈಟ್ https://ssp.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https:dom.karnataka.gov.in ನಲ್ಲಿ ಹಾಗೂ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಪಡೆಯಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಸಿಕ ವ್ಯಾಸಂಗ ವೇತನ-ಫೆಲೋಶಿಪ್‌ಗಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಅರ್ಜಿ ಕರೆ

ವಿಜಯಪುರ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರಸಕ್ತ 2023-24ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್‌ಡಿ ಅಧ್ಯಯನ ಪ್ರಾರಂಭಿಸಿರುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ-ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ.ಪೂರ್ಣಾವಧಿ ಪಿಎಚ್‌ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಮಾಸಿಕ 10 ಸಾವಿರ ರೂ. ಗರಿಷ್ಠ 3 ವರ್ಷಗಳ ಅವಧಿಗೆ ವ್ಯಾಸಂಗ ವೇತನ-ಫೆಲೋಶಿಪ್‌ನ್ನು ಪ್ರವರ್ಗವಾರು ಮೀಸಲಾತಿ, ಮೆರಿಟ್ ಹಾಗೂ ಅನುದಾನ ಲಭ್ಯತೆಗೆ ಅನುಗುಣವಾಗಿ ಹಾಗೂ ನಿಯಮಾನುಸಾರ ಅರ್ಹ ಅಭ್ಯರ್ಥಿಗಳಿಗೆ ನೀಡಲಾಗುವುದು.ಈ ಯೋಜನೆಯಡಿ ಸೌಲಭ್ಯ ಪಡೆಯಲಿಚ್ಛಿಸುವ ಅರ್ಹ ಅಭ್ಯರ್ಥಿಗಳು ಆನ್‌ಲೈನ್ (2 ಭಾವಚಿತ್ರ ಒಳಗೊಂಡ)ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳು, ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ, ಪಿಎಚ್‌ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿರುವ ಬಗ್ಗೆ ವಿಶ್ವವಿದ್ಯಾಲಯ-ಅಧಿಕೃತ ಸಂಸ್ಥೆಯಿಂದ ಪ್ರಮಾಣ ಪತ್ರ, ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ಶಿಕ್ಷಣ ಸಂಸ್ಥೆ, ಕಾಲೇಜ್ ಅಥವಾ ವಿಶ್ವವಿದ್ಯಾಲಯ ಅಧಿಕೃತ ಸಂಸ್ಥೆಯಿಂದ ನಿಗದಿತ ನಮೂನೆಯಲ್ಲಿ (ನಿಗದಿತ ನಮೂನೆ ಇಲಾಖೆ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು) ದೃಢೀಕರಣ ಪತ್ರ, ಬ್ಯಾಂಕ್ ಖಾತೆ ವಿವರ, ಆಧಾರ್ ಕಾರ್ಡ್ ಪ್ರತಿ, ಪ್ರಥಮ ವರ್ಷದ ಪೂರ್ಣಾವಧಿ ಪಿಹೆಚ್‌ಡಿ ಅಧ್ಯಯನಕ್ಕೆ ದಾಖಲಾಗಿರುವ ಶುಲ್ಕದ ರಸೀದಿ, ವಿಶೇಷ ಚೇತನ ಅಭ್ಯರ್ಥಿಯಾಗಿದ್ದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರ, ಮುಚ್ಚಳಿಕೆ ಪತ್ರದೊಂದಿಗೆ ದಿನಾಂಕ : 10-01-2024ರೊಳಗೆ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿ ವಿಜಯಪುರ ವಿಳಾಸಕ್ಕೆ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 8050770004 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಥಮ ಪಿಯುಸಿ ವಿದ್ಯಾರ್ಥಿ ಹೃದಯಾಘಾತದಿಂದ ಸಾವು



ಉಡುಪಿ: ಪ್ರಥಮ ಪಿಯುಸಿ ವಿದ್ಯಾರ್ಥಿ ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ಉಡುಪಿಯಲ್ಲಿ ನಡೆದಿದೆ. ಅಫ್ಕಾರ್ (17) ಮೃತಪಟ್ಟ ವಿದ್ಯಾರ್ಥಿ. ಈತ ಉಡುಪಿ ಕಲ್ಯಾಣಪುರ ಮಿಲಾಗ್ರಿಸ್ ಪಿಯು ಕಾಲೇಜು ವಿದ್ಯಾರ್ಥಿಯಾಗಿದ್ದಾನೆ. ಅಫ್ಕಾರ್, ಹುಟ್ಟಿನಿಂದ ಹೃದಯ ಸಂಬಂಧಿ ಕಾಯಿಲೆಯಿಂದ ಬಳಲುತ್ತಿದ್ದನು. ಅಂತೆಯೇ ಡಿಸೆಂಬರ್ 6 ರಂದು ನಾರಾಯಣ ಹೃದಯಾಲಯದಲ್ಲಿ ಚಿಕಿತ್ಸೆ ಪಡೆದಿದ್ದ. ಡಿ.18 ರಂದು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದ ಮನೆಗೆ ಮರಳಿದ್ದ. ಊರಿಗೆ ಹಿಂದಿರುಗಿದ ಸಂದರ್ಭ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಂಡಿದೆ. ಹೀಗಾಗಿ ಮತ್ತೆ ಆಸ್ಪತ್ರೆಗೆ ಸಾಗಿಸುವ ವೇಳೆಯಲ್ಲಿ ಅಫ್ಕಾರ್ ಮೃತಪಟ್ಟಿದ್ದಾನೆ.

## ಪತಿಯ ಎದೆಗೆ ಚಾಕುವಿನಿಂದ ಇರಿದು ಹತ್ಯೆಗೈದ ಪತ್ನಿ

ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ಪತ್ನಿಯಿಂದಲೇ ಪತಿ ಬರ್ಬರ ಹತ್ಯೆಗೈದ ಪ್ರಕರಣವೊಂದು ನಡೆದಿದೆ. ಉಮೇಶ್ ದಾಮಿ (27) ಕೊಲೆಯಾದ ಪತಿಯಾಗಿದ್ದು, ಈತನನ್ನು ಪತ್ನಿ ಮನಿಷಾ ದಾಮಿ ಕೊಲೆ ಮಾಡಿದ್ದಾಳೆ. ಈ ಘಟನೆ ಹುಳಿಮಾವು ಸಮೀಪದ ಕಾಲೇಜಿನಲ್ಲಿ ನಡೆದಿದೆ.

ಈ ದಂಪತಿ ಕಾಲೇಜೊಂದರಲ್ಲಿ ಸೆಕ್ಯುರಿಟಿ ಹಾಗೂ ಹೌಸ್ ಕೀಪಿಂಗ್ ಕೆಲಸ ಮಾಡುತ್ತಿದ್ದರು. ಘಟನೆ ನಡೆದಂದು ಉಮೇಶ್ ರಾತ್ರಿ ಗೆಳೆಯನೊಂದಿಗೆ ಎಣ್ಣೆ ಪಾರ್ಟಿಗೆ ಹೋಗಿದ್ದ. ಪಾರ್ಟಿ ಮುಗಿಸಿಕೊಂಡು ರಾತ್ರಿ 12 ಗಂಟೆ ಸುಮಾರಿಗೆ ಮನೆಗೆ ವಾಪಸ್ಸಾಗಿದ್ದ. ಆ ವೇಳೆ ಮನಿಷಾ ಫೋನ್ ನಲ್ಲಿ ಮಾತನಾಡುತ್ತಿದ್ದಳು. ಇದರಿಂದ ಕೋಪಗೊಂಡ ಉಮೇಶ್ ಆಕೆಯ ಜೊತೆಗೆ ಜಗಳವಾಡಿದ್ದಾನೆ. ಅನೈತಿಕ ಸಂಬಂಧ ಹೊಂದಿರೋ ಬಗ್ಗೆ ಅನುಮಾನದಿಂದ ಪತ್ನಿ ಜೊತೆ ಗಲಾಟೆ ಮಾಡಿದ್ದಾನೆ. ಈ ಜಗಳ ವಿಕೋಪಕ್ಕೆ ಹೋದಾಗ ಮನಿಷಾ, ಚಾಕು ತೆಗೆದುಕೊಂಡು ಉಮೇಶ್ ದಾಮಿಗೆ ಇರಿದಿದ್ದಾಳೆ. ಪರಿಣಾಮ ತೀವ್ರ ರಕ್ತಸ್ರಾವದಿಂದ ಉಮೇಶ್ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾನೆ. ಬಳಿಕ ಉಮೇಶ್ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಇತ್ತ ಆರೋಪಿ ಮನಿಷಾಳನ್ನ ಬಂಧಿಸಿ ಹುಳಿಮಾವು ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಈ ಸಂಬಂಧ ಹುಳಿಮಾವು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನೆಲಮಂಗಲದಲ್ಲಿ ಸಿಲಿಂಡರ್ ಸ್ಫೋಟ; ಇಬ್ಬರಿಗೆ ಗಂಭೀರ ಗಾಯ





ಬೆಂಗಳೂರು: ಜಿಲ್ಲೆಯ ನೆಲಮಂಗಲ ದ ವಾಜರಹಳ್ಳಿಯಲ್ಲಿ ಸಿಲಿಂಡರ್ ಸ್ಫೋಟವಾಗಿ ಇಬ್ಬರಿಗೆ ಗಂಭೀರ ಗಾಯವಾಗಿದೆ. ವಿಜಯಮ್ಮ ಅವರಿಗೆ ಸೇರಿದ ಮನೆ ಇದಾಗಿದ್ದು, ಎರಡನೇ ಮಹಡಿಯನ್ನು ಚಿಕ್ಕಬಾಣಾವರದಲ್ಲಿ ಲೈನ್ಮನ್ ಆಗಿ ಕೆಲಸ ಮಾಡುತ್ತಿದ್ದ ಸಂಜಯ್ ಎಂಬಾತನಿಗೆ ಕಳೆದ ಎಂಟು ವರ್ಷದಿಂದ ಬಾಡಿಗೆ ಕೊಡಲಾಗಿತ್ತು.

ಏಕಾಏಕಿ ಈ ಅನಾಹುತ ನಡೆದಿದ್ದು, ಸಂಜಯ್(40) ಹಾಗೂ ಲೇಖನಾ (05) ಅವರನ್ನು ನೆಲಮಂಗಲ ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಗಳು ಅಗ್ನಿನಂದಿಸಿದ್ದಾರೆ. ಈ ಕುರಿತು ನೆಲಮಂಗಲ ಟೌನ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

# ಮಹಾತ್ಮ ಗಾಂಧೀಜಿಯವರು ನೈತಿಕ ಜೀವನಕ್ಕೆ ಹೆಚ್ಚು ಮಹತ್ವ



ವಿಜಯಪುರ: ಭಾರತ ಸ್ವಾತಂತ್ರ್ಯ ಸಂಗ್ರಾಮದ ಮುಂಚೂಣಿ ನಾಯಕ, ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ತಮ್ಮ ಬದುಕಿನಲ್ಲಿ ನೈತಿ-ಕ ಜೀವನಕ್ಕೆ ಹೆಚ್ಚಿನ ಮಹತ್ವ ನೀಡಿದ್ದರು ಎಂದು ವಿಜಯಪುರ ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ ಹೇಳಿದರು.ಅವರು ನಗರದ ಶ್ರೀ ಮಾಣಿಕೇಶ್ವರಿ ಚೈತನ್ಯ ವಿದ್ಯಾಸಂಸ್ಥೆಯಲ್ಲಿ ನಿಡಗುಂದಿ ತಾಲೂಕಿನ ಬೇನಾಳದ ರಾಷ್ಟ್ರಪಿತ ಮಹಾತ್ಮ ಗಾಂಧಿ ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿದ್ದ" ಬಾಪೂ ಎಂಬ ಜಗದ ಬೆಳಕು " ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿ ಆಗಮಿಸಿ ಮಾತನಾಡಿದರು. ಮಹಾತ್ಮ ಗಾಂಧೀಜಿಯವರು ಸ್ವಾತಂತ್ರ್ಯ ಸೇನಾನಿ ಅಷ್ಟೇ ಅಲ್ಲದೆ ವಿಜ್ಞಾನಿಯಾಗಿ, ಅರ್ಥ ಶಾಸ್ತ್ರಜ್ಞ ನಾಗಿ, ವೈದ್ಯನಾಗಿ, ವಕೀಲನಾಗಿ, ಶಿಕ್ಷಕನಾಗಿ, ಪತ್ರಕರ್ತನಾಗಿ, ಸಂಪಾದಕನಾಗಿ, ಸಮಾಜ ಸುಧಾರಕನಾಗಿ ಜಾಗತಿಕ ಇತಿಹಾಸದ ಪುಟಗಳಲ್ಲಿ ಚಿರಸ್ಥಾಯಿಯಾಗಿದ್ದಾರೆ ಎಂದು ತಿಳಿಸಿದರು. ವಿಜಯಪುರ ನಗರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ ಮಾತನಾಡಿ, ಮಹಾತ್ಮ ಗಾಂಧೀಜಿಯವರು ಪ್ರತಿ ಪಾದಿಸಿದ ಸತ್ಯ ಶಾಂತಿ ಅಹಿಂಸೆ ಮತ್ತು ಅವರ ಸರ್ವೋದಯ ತತ್ವ ಮಾನವ ಪ್ರಪಂಚಕ್ಕೆ ಮಾರ್ಗದರ್ಶಿಯಾಗಿದೆ ಎಂದರು.ಆಕಾಶವಾಣಿ ಜಿಲ್ಲಾ ವರದಿಗಾರ

ನೇತಾಜಿ ಗಾಂಧಿ ಮಾತನಾಡಿ 79 ವರ್ಷ ಬದುಕಿದ ಗಾಂಧೀಜಿಯವರು 52 ವರ್ಷ ಪತ್ರಕರ್ತನಾಗಿ 10ದಶಲಕ್ಷ ಪದಗಳನ್ನು ಬರೆದರು. ಬ್ರಿಟಿಷ್ ರ ಎಚ್ಚರಿಕೆಯ ನಡುವೆಯೇ 6 ಪತ್ರಿಕೆಗಳನ್ನು ಪ್ರಕಟಿಸಿ ರಾಜಕೀಯವಾಗಿ, ಸಾಮಾಜಿಕವಾಗಿ, ಧಾರ್ಮಿಕವಾಗಿ, ಶೈಕ್ಷಣಿಕವಾಗಿ ಆ ಕಾಲಘಟ್ಟದಲ್ಲಿಯೇ ಸಾಕಷ್ಟು ಸುಧಾರಣೆ ಮಾಡಿದ್ದರು ಎಂದರು.ನಗರದ ಸರ್ಕಾರಿ ಬಾಲಕಿಯರ ಪಿಯು ಕಾಲೇಜಿನ ಇತಿಹಾಸ ಉಪನ್ಯಾಸಕ ಆರ್. ಸಿ. ಹಿರೇಮಠ ಮಾತನಾಡಿ, ಭಾರತದ ಮಣ್ಣಿನಲ್ಲಿ ಹುಟ್ಟಿದ ಮಹಾತ್ಮ ಗಾಂಧೀಜಿಯವರು ತಮ್ಮ ತತ್ವ – ಸಿದ್ಧಾಂತಗಳಿಂದ ಮನುಕುಲವನ್ನು ಬೆಳಗಿದ ಮಹಾ ಮಾನವತಾವಾದಿ ಎಂದರು.ಸಂಸ್ಥೆಯ ಅಧ್ಯಕ್ಷರಾದ ಶಿವಾನಂದ ಅವಟಿ ಮಾತನಾಡಿ,

ನಡೆ ನುಡಿಗೆ ವ್ಯತ್ಯಾಸ ಇಲ್ಲದಂತೆ ಬದುಕಿದ ಮಹಾ ಪುರುಷ ಮಹಾತ್ಮ ಗಾಂಧೀಜಿಯವರ ಎಂದು ತಮ್ಮ ಅಧ್ಯಕ್ಷೀಯ ನುಡಿಗಳಲ್ಲಿ ಹೇಳಿದರು.ರಸಪ್ರಶ್ನೆ :ಬಾಪೂಜಿ ಕುರಿತು ಜರುಗಿದ ರಸಪ್ರಶ್ನೆಯಲ್ಲಿ ವಿಜೇತರಾದ ವಿದ್ಯಾರ್ಥಿ/ನಿಯರಿಗೆ ಗಾಂಧಿ ಪುಸ್ತಕ ಹಾಗೂ ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಯಿತು.

## ಅತಿಥಿ ಉಪನ್ಯಾಸಕರ ಹೋರಾಟಕ್ಕೆ ಮಲ್ಲಿಕಾರ್ಜುನ ಚರಂತಿಮಠ ಬೆಂಬಲ



ಬಾಗಲಕೋಟೆ : ರಾಜಾದ್ಯಂತ ಸೇವೆ ಸಲ್ಲಿಸುವ ಅತಿಥಿ ಉಪನ್ಯಾಸಕರ ಸೇವೆಯನ್ನು ಕೂಡಲೇ ಕಾಯಂಗೊಳಿಸುವ ಮೂಲಕ ಅವರ ಬದುಕಿಗೆ ಭದ್ರತೆ ಒದಗಿಸಬೇಕು ಎಂದು ಚರಂತಿಮಠ ಮತ್ತು ವಸ್ತ್ರೊದ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಮಲ್ಲಿಕಾರ್ಜುನ ಚರಂತಿಮಠ ಒತ್ತಾಯಿಸಿದರು. ಜಿಲ್ಲಾಧಿಕಾರಿ ಕಚೇರಿ ಎದುರು ಕಳೆದ 24 ದಿನಗಳಿಂದ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಧರಣಿಗೆ ಬೆಂಬಲ ವ್ಯಕ್ತಪಡಿಸಿ ಅವರು ಮಾತನಾಡಿದರು. ಅತಿಥಿ ಉಪನ್ಯಾಸಕರು ಅತ್ಯಂತ ಕಡಿಮೆ ವೇತನದಲ್ಲಿ ಕೆಲಸ ಮಾಡುತ್ತಿದ್ದಾರೆ. ದೇಶದ ಯುವ ಸಮೂದಾಯವನ್ನು ವಿದ್ಯಾವಂತರನ್ನಾಗಿ ಮಾಡುವ ಜತೆಗೆ ಉತ್ತಮ ಪ್ರಜೆಗಳನ್ನಾಗಿ ರೂಪಿಸುವ ಜವಾಬ್ದಾರಿ ಉಪನ್ಯಾಸಕರು ನಿಭಾಯಿಸುತ್ತಿದ್ದಾರೆ. ಕಳೆದ 24 ದಿನಗಳಿಂದ ಹೋರಾಟ ನಡೆಸುತ್ತಿದ್ದರೂ ಸಚಿವರು, ಸಂಬಂಧಿಸಿದ ಅಧಿಕಾರಿಗಳು ಅವರ ಬೇಡಿಕೆಗೆ ಸ್ಪಂದಿಸದೇ ಇರುವುದು ಸರ್ಕಾರದ ನಿರ್ಲಕ್ಷ್ಯ ಎತ್ತಿ ತೋರಿಸುತ್ತದೆ ಎಂದು ಆರೋಪಿಸಿದರು. ಉಪನ್ಯಾಸಕರು, ತರಗತಿ ಬಹಿಷ್ಕರಿಸಿ ಹೋರಾಟ ನಡೆಸುತ್ತಿರುವುದರಿಂದ ಕಾಲೇಜು ವಿದ್ಯಾರ್ಥಿಗಳಿಗೂ ಸಮಸ್ಯೆಯಾಗಿದೆ.

ಈ ಕೂಡಲೇ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಹಾಗೂ ಉಪನ್ಯಾಸಕರ ಬದುಕಿಗೆ ಭದ್ರತೆಗಾಗಿ ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು. ಇಡೀ ರಾಜ್ಯಾದ್ಯಂತ ಅತಿಥಿ ಉಪನ್ಯಾಸಕರು ಇಂದು ಬೀದಿಗಿಳಿದು ಹೋರಾಟ ನಡೆಸುತ್ತಿದ್ದಾರೆ.

ಅವರಿಗೆ ತಕ್ಷಣ ಸ್ಪಂದಿಸಬೇಕು ಎಂದು ಆಗ್ರಹಿಸಿದರು.

ಕಾಮಧೇನು ಸಂಸ್ಥೆಯ ಅಧ್ಯಕ್ಷ ರವಿ ಕುಮಟಗಿ, ವಿಜಯ ಸುಲಾಖೆ, ಗುರು ಅನಗವಾಡಿ, ಅರುಣ ಲೋಕಾಪುರ, ಪ್ರಶಾಂತ ಸೋನಕನಾಳ, ರಾಘು ಯಾದಗಿರಿ ಮುಂತಾದವರು ಪಾಲ್ಗೊಂಡಿದ್ದರು..

## 5 ಕೋಟಿ ನೀರಾವರಿ ಯೋಜನೆ ನಿಷ್ಪ್ರಯೋಜಕ



ಗುಳೇದಗುಡ್ಡ: ತಾಲ್ಲೂಕಿನ ಇಂಜಿನವಾರಿ ಏತ ನೀರಾವರಿ ಯೋಜನೆಯು ಕೃಷಿ ಭೂಮಿಗೆ ನೀರಾವರಿ ಒದಗಿಸುವ ಬಹು ಮಹತ್ವವಾದ ಯೋಜನೆಯಾಗಿದೆ. ಈ ಹಿಂದೆ ಬಿಜೆಪಿ ಸರ್ಕಾರವಿದ್ದ ಅವಧಿಯಲ್ಲಿ ಕೋಟ್ಯಂತರ ಖರ್ಚುಮಾಡಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕೆಲಸ ಪೂರ್ಣಗೊಳಿಸಲಾಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಏತ ನೀರಾವರಿ ಯೋಜನೆ ಸಂಪೂರ್ಣವಾಗಿ ವಿಫಲವಾಗಿದೆ.

ಇಂಜಿನಿವಾರಿ ಗ್ರಾಮ ಹಳದೂರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಮಲಪ್ರಭಾ ನದಿಯ ದಡದಲ್ಲಿರುವ ಗ್ರಾಮವು ಸಣ್ಣ ನೀರಾವರಿ ಇಲಾಖೆಯ ಆರ್‌ಐಡಿಎಫ್ 14ನೇ ಹಣಕಾಸು ಯೋಜನೆಯಡಿಯಲ್ಲಿ 2010 ರಲ್ಲಿ 4.99 ಕೋಟಿ ವೆಚ್ಚದಲ್ಲಿ 1225 ಎಕರೆ ಭೂಮಿಗೆ ನೀರು ಒದಗಿಸಲು ಸಿದ್ದಪಡಿಸಿದೆ. ಇಂಜಿನವಾರಿ ಏತ ನೀರಾವರಿ ಯೋಜನೆಯಿಂದ ರೈತರ ಕೃಷಿ ಭೂಮಿಗೆ ನೀರು ಒದಗಿಸಲು ಸಾಧ್ಯವಾಗಿಲ್ಲ. ಈ ಭಾಗದ ರೈತರ ಕನಸು ನನಸಾಗದೇ ಕನಸಾಗದೆ ಉಳಿದಿದೆ.

ಯೋಜನೆ ಅನಾನುಕೂಲ: ಒಂದು ವೇಳೆ ಕಾಲುವೆಗೆ ನೀರು ಹರಿಸಿದ್ದರೆ ಈ ಯೋಜನೆಯಿಂದ 1225 ಎಕರೆ ಕೃಷಿಭೂಮಿಗೆ ನೀರು ಒದಗಿಸಲಾಗುತ್ತಿತ್ತು. ವಾಸ್ತವದಲ್ಲಿ ಈ ಭಾಗದ ರೈತರ ಭೂಮಿಗಳು ನೀರಾವರಿಯಿಂದ ವಂಚಿತವಾಗಿವೆ. ರೈತರು ನೀರಿಲ್ಲದೆ, ಸರ್ಕಾರ ಮತ್ತು ಅಧಿಕಾರಿಗಳಿಗೆ ಹಿಡಿಶಾಪ ಹಾಕುವಂತಾಗಿದೆ. ಕುಸಿದ ಕಾಲುವೆಗಳು: ಮಲಪ್ರಭಾ ನದಿಯ ದಂಡೆಯ ಮೇಲೆ ಇಂಜನವಾರಿ ಗ್ರಾಮದ ಹತ್ತಿರ ನಿರ್ಮಿಸಿದ ಪಂಪ್‌ಹೌಸ್ ನಿರ್ವಹಣೆಯಿಲ್ಲದೆ ಬಂದ್ ಆಗಿದೆ. ಅದಕ್ಕೆ ಬೀಗ ಜಡಿದು ಹಲವು ವರ್ಷಗಳೇ ಕಳೆದಿವೆ. ಅಧಿಕಾರಿಗಳು ಈ ಯೋಜನೆ ಪೂರ್ಣಗೊಳಿಸಿದರೂ ಇಂಜನವಾರಿ ಹಾಗೂ ಬೂದಿನಗಡ ವ್ಯಾಪ್ತಿಯ ಕೃಷಿಭೂಮಿ ನೀರಾವರಿಯಾಗುತ್ತಿಲ್ಲ. ಕಾಲುವೆ ಅಲ್ಲಲ್ಲಿ ಕುಸಿದು ಬೀಳುವ ಹಂತದಲ್ಲಿದೆ. ಕಾಲುವೆಯಲ್ಲಿ ಮುಳ್ಳುಕಂಟಿಗಳು ಬೆಳೆದು ನಿಂತಿವೆ. ಭೂಮಿಗೆ ನೀರು ಒದಗಿಸುವುದು ಮರೀಚಿಕೆಯಾಗಿದೆ.

ಕಳ್ಳರ ಪಾಲು: ವಿದ್ಯುತ್ ಸರಬರಾಜು ಕೊಠಡಿ ಬೀಗ ಮುರಿದು ಸಣ್ಣ ಟಿಸಿ ಹಾಗೂ ಅಲ್ಲಿರುವ ಆಯಿಲ್‌ನ್ನು ಕಳವು ಮಾಡಲಾಗಿದೆ. ಅಲ್ಲಿ ವಿದ್ಯುತ್ ಸರಬರಾಜಿಗೆ ತೊಂದರೆಯಾಗಿದೆ.

## ಕರ್ನಾಟಕ ರಕ್ಷಣಾ ವೇದಿಕೆಯ ಉದ್ಘಾಟನೆ ಕಾರ್ಯಕ್ರಮ



ಹುನುಗುಂದ : ನಿನ್ನೆ ದಿನ ಹುನಗುಂದ ತಾಲೂಕ ವ್ಯಾಪ್ತಿಗೆ ಹೊಂದಿಕೊಂಡಿರುವ ಮುಳ್ಳೂರು ಗ್ರಾಮದಲ್ಲಿ ಎಚ್ ಶಿವರಾಮೇಗೌಡ್ರು ಕರ್ನಾಟಕ ರಕ್ಷಣಾ ವೇದಿಕೆಯ ಉದ್ಘಾಟನೆ ಕಾರ್ಯಕ್ರಮ ನೆರವೇರಿಸಿತ್ತು ಉದ್ಘಾಟನೆಯಲ್ಲಿ ಮಾಜಿ ಗ್ರಾಮ ಪಂಚಾಯಿತಿ ಐಹೊಳೆ ಅಧ್ಯಕ್ಷರಾದ ರಾಮಚಂದ್ರಪ್ಪ ಕೊಳಮಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ಹುನಗುಂದ ತಾಲೂಕ ಕರವೇ ಅಧ್ಯಕ್ಷರಾದ ಶರಣು ಗಾಣಿಗೇರ್ ಹಾಗೂ ತಾಲೂಕು ಉಪಾಧ್ಯಕ್ಷರಾದ ಶ್ರೀಕಾಂತ ಗಗನದವರು ದೀಪ ಬೆಳಗುವ ಮೂಲಕ ಗ್ರಾಮ ಘಟಕವನ್ನು ಉದ್ಘಾಟನೆ ಮಾಡಿದರು ಹಾಗೂ ಕಾರ್ಯಕ್ರಮದಲ್ಲಿ ತಾಲೂಕು ಉಪಾಧ್ಯಕ್ಷರಾದ ಶ್ರೀಕಾಂತ ಗಗನದ ಇದ್ದಲಗಿ ಗ್ರಾಮ ಘಟಕದ ಸಂಘಟನೆ ಕಾರ್ಯದರ್ಶಿ ಅಶೋಕ್ ನಾಡಗೌಡರು ಮಲ್ಲು ಡೋಣಿ ತಾಲೂಕ ಪ್ರಧಾನ ಕಾರ್ಯದರ್ಶಿಗಳಾದ ಹುಸನಪ್ಪ ಪೂಜಾರಿ ಕರಿಯಪ್ಪ ಬೇವಿನ ಗಿಡ. ಹಾಗೂ ಹೂವಿನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ನೂತನವಾಗಿ ಗ್ರಾಮ ಘಟಕ ಅಧ್ಯಕ್ಷರಾದ ಸಚಿನ್ ಮಾದರ್ ಹಾಗೂ ಮುಳ್ಳೂರು ಗ್ರಾಮ ಘಟಕದ ಪದಾಧಿಕಾರಿಗಳು ಹಾಗೂ ನಮ್ಮ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕ ಪದಾಧಿಕಾರಿಗಳು ಭಾಗವಹಿಸಿದ್ದರು ಗ್ರಾಮ ಘಟಕದ ಗೌರವಾಧ್ಯಕ್ಷರಾದ ರಾಮಚಂದ್ರಪ್ಪ ಕೊಳಮಲಿ ಅವರು ಮಾತನಾಡಿ ಕನ್ನಡ ನಾಡು ನುಡಿಗಾಗಿ ನಾವು ದುಡಿಯುವಂತ ಕೆಲಸ ಮಾಡುತ್ತೇವೆ ಅಂತ ಹೇಳಿದರು ತಾಲೂಕ ಅಧ್ಯಕ್ಷರಾದ ಶರಣು ಗಾಣಿಗೆ ರವರು ಮಾತನಾಡಿ ಸರಕಾರದಿಂದ ಬರುವಂತಹ ಈಗ ನಾವ್ ವೇಳೆಯಲ್ಲಿ ಹೋರಾಟ ಮಾಡಿ ಪಡೆದುಕೊಳ್ಳುವಂತೆ ವೇಳೆ ಬಂದಿದೆ ಸರಕಾರದಿಂದ ಬರುವಂತಹ ಸೌಲತ್ತುಗಳನ್ನು ಗ್ರಾಮದ ಜನತೆಗೆ ಮುಟ್ಟಿಸುವಂತಹ ಕೆಲಸ ಮಾಡುತ್ತೇವೆ ಅಂತ ಹೇಳಿ ಮಾತಿಗೆ ವಿರಾಮ ಕೊಟ್ಟರು.

## ಜ.15ರೊಳಗೆ ಸೈಕ್ಲಿಂಗ್ ವೆಲೊಡ್ರೊಂ ಕಾಮಗಾರಿ ಪೂರ್ಣಗೊಳಿಸಿ



ವಿಜಯಪುರ: ವಿಜಯಪುರ ನಗರದ ಹೊರವಲಯದ ಭೂತನಾಳ ಗ್ರಾಮದ ಹತ್ತಿರ ನಿರ್ಮಾಣವಾಗುತ್ತಿರುವ ಸೈಕ್ಲಿಂಗ್ ವೆಲೋಡ್ರೋಂ ಕಾಮಗಾರಿಯನ್ನು ಇದೇ ಜನವರಿ 15ರೊಳಗೆ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಸೂಚನೆ ನೀಡಿದ್ದಾರೆ. ಗುರುವಾರ ಸೈಕ್ಲಿಂಗ್ ವೆಲೋಡ್ರೋಂ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಸೈಕ್ಲಿಂಗ್ವೆ ಲೊಡ್ರೊಂ ಕಾಮಗಾರಿಯು ಆರಂಭವಾಗಿ ಬಹಳ ದಿನಗಳಾದರೂ ಕಾಮಗಾರಿ ಪೂರ್ಣಗೊಂಡಿಲ್ಲ. ಇದ-ರಿಂದ ಈ ಭಾಗದ ಸೈಕ್ಲಿಸ್ಟ್ ಗಳಿಗೆ ತೊಂದರೆಯಾಗುತ್ತಿರುವುದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಪ್ರಥಮಾಧ್ಯತೆಯಲ್ಲಿ ಬಾಕಿ ಉಳಿದ ಕಾಮಗಾರಿಯನ್ನು ಕೈಗೊಂಡು ಜನೇವರಿ 15ರೊಳಗಾಗಿ ಪೂರ್ಣಗೊಳಿಸುವಂತೆ ಸೂಚಿಸಿದ ಅವರು, ಕಾಮಗಾರಿಯ ಗುಣಮಟ್ಟದಲ್ಲಿ ಯಾವದೇ ರಾಜಿ ಮಾಡಿಕೊಳ್ಳದೇ ಉತ್ತಮ ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಅವರು ಸೂಚಿಸಿದರು.ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪಿ.ಎಚ್.ಚವ್ಹಾಣ, ಸಹಾಯಕ ಅಭಿಯಂತರ ಎ.ಸಿ.ಮ್ಯಾಗೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಣಕಾಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನರಸಿಂಹ ದೇವಸ್ಥಾನದಲ್ಲಿ ಗುರು ಚರಿತ್ರೆ ಪಾರಾಯಣ



ವಿಜಯಪುರ: ವಿಜಯಪುರ ನಗರದ ಅರಕಿಲ್ಲಾದಲ್ಲಿರುವ ಇತಿಹಾಸ ಪ್ರಸಿದ್ಧ ಪುರಾತನ ಶ್ರೀ ನರಸಿಂಹ ದೇವಸ್ಥಾನದಲ್ಲಿ ಹಮ್ಮಿಕೊಂಡಿರುವ ಶ್ರೀ ದತ್ತ ಜಯಂತಿ ಉತ್ಸವಕ್ಕೆ ಹಣಮಂತ ವೈದ್ಯ ಅವರು ಶ್ರೀ ಗುರು ಚರಿತ್ರೆ ಪಾರಾಯಣ ಪ್ರಾರಂಭ ಮಾಡುವ ಮೂಲಕ ಚಾಲನೆ ನೀಡಿದರು. ಸಂಜೆ ವಿಜಯಪುರದ ಶಾರದಾ ಭಜನಾ ಮಂಡಳಿ ಅವರಿಂದ ಭಜನಾ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಶ್ರೀ ನರಸಿಂಹ ದೇವ ಟ್ರಸ್ಟ ದೇವಸ್ಥಾನ ಜೀರ್ಣೋದ್ದಾರ ಸಮೀತಿ ಅಧ್ಯಕ್ಷ ಸುಭಾಸ ಪೂಜಾರಿ ಪದಾಧಿಕಾರಿಗಳಾದ ಶಿವಾನಂದ ಅಣ್ಣೆಪ್ಪನವರ, ಮಹಾದೇವಿ ಪೂಜಾರಿ, ಶಿವಶರಣ ಕಲ್ಲೂರ,ರಮೇಶ ಬನಟ್ಟಿ,ವಿರೇಂದ್ರ ಪಾಟೀಲ, ಪುಷ್ಪಾ ಬಿರಾದಾರ ಶಿವಾಜಿ ಕುಮಟಗಿ ಹಿರಿಯರಾದ ವಿಶ್ವನಾಥ ಭೋಗಶೆಟ್ಟಿ, ಗುರುಲಿಂಗಪ್ಪ ಸಜ್ಜನ, ಸಾಯಿಬಾಬಾ ಸಿಂದಗೇರಿ, ಸುರೇಶಗೌಡ ಪಾಟೀಲ ಡಾ ಅನಿಲ ಜಾಧವ ಪಾರ್ವತಿ ಪೂಜಾರಿ,ಸುನಂದಾ ಪೂಜಾರಿ ಪೂಜಾರಿಗಳಾದ ಮಹಿಂದ್ರ ಪೂಜಾರಿ ಪ್ರವೀಣ ಪೂಜಾರಿ ಬಸವರಾಜ ಪೂಜಾರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## 25 ಅಡಿ ಎತ್ತರದ ಕಬ್ಬು ಬೆಳೆದ ಸಹೋದರರು



ನಿಡಗುಂದಿ (ವಿಜಯಪುರ ಜಿಲ್ಲೆ): ತಾಲ್ಲೂಕಿನ ಗೊಳಸಂಗಿ ಗ್ರಾಮದ ಸಾಳುಂಕೆ ಪರಿವಾರದ ನಿವೃತ್ತ ಸೈನಿಕ ನಾರಾಯಣ ಹಾಗೂ ಅವರ ಸಹೋದರ ಸಿದ್ದುಬಾ ಅವರು 23ರಿಂದ 25 ಅಡಿ ಎತ್ತರದ ಕಬ್ಬು ಬೆಳೆದಿದ್ದಾರೆ.

5 ಎಕರೆ ಗದ್ದೆಯಲ್ಲಿ 686 ಟನ್ ಕಬ್ಬು ಬೆಳೆದಿದ್ದಾರೆ. ಸಾಮಾನ್ಯವಾಗಿ ಒಂದು ಕಬ್ಬು 12 ಅಡಿ ಎತ್ತರ ಮತ್ತು 2 ಕೆಜಿ ತೂಕ ಇರುತ್ತದೆ. ಆದರೆ ಇಸ್ರೇಲ್ ತಂತ್ರಜ್ಞಾನ ಬಳಸಿ ಬೆಳೆಸಲಾದ ಕಬ್ಬು 3 ರಿಂದ 4.7 ಕೆಜಿ ತೂಗುತ್ತದೆ. 28 ರಿಂದ 32 ಗಣಿಕೆಯಿದ್ದು, 23 ರಿಂದ 25 ಅಡಿ ಎತ್ತರ ಬೆಳೆದಿದೆ.

ಈ ಕಬ್ಬು ನೋಡಲು ಮಂಗಳವಾರ ಉತ್ತರ ಪ್ರದೇಶದಿಂದ ರೈತರಾದ ರವಿಂದರ್ಸಿಂಗ್, ಮಹಾರಾಜಸಿಂಗ್, ಮುನೇಂದ್ರಸಿಂಗ್, ಮುಖೇಶಸಿಂಗ್, ಅಮ್ರೋಹಾ ಅವರು ಗ್ರಾಮಕ್ಕೆ ಭೇಟಿ ನೀಡಿದರು. ಈ ಕಬ್ಬು ಬೆಳೆಯ ಸಮಗ್ರ ಮಾಹಿತಿ ಕಲೆ ಹಾಕಿದ ಅವರು ಇಲ್ಲಿಯ ಮಾದರಿಯನ್ನು ತಮ್ಮ ಊರಿನಲ್ಲೂ ಅಳವಡಿಸಿಕೊಳ್ಳುವುದಾಗಿ ತಿಳಿಸಿದರು.

ಕಬ್ಬಿನ ಬೆಳೆಯ ಬೀಜ ವಿತರಕ ಮಹಾರಾಷ್ಟ ಕಾಗವಾಡದ ಸುರೇಶ ಕಾಂಬಳೆ ಮಾತನಾಡಿ, 'ಅಕ್ಕಪಕ್ಕದ ರಾಜ್ಯಗಳ ರೈತರು ನಮ್ಮ ಬಳಿ ಕಬ್ಬಿನ ಬೀಜ ಒಯ್ದು ನಾಟಿ ಮಾಡಿದ್ದಾರೆ. ಆದರೆ, ಗೊಳಸಂಗಿಯ ಸಾಳುಂಕೆ ಸಹೋದರರು ಬೆಳೆದಿರುವುದೇ ವಿಶಿಷ್ಟವಾದದ್ದು' ಎಂದರು.

'ಇಷ್ಟು ಹೆಚ್ಚಿನ ಪ್ರಮಾಣದ ಬೆಳೆ ಬೆಳೆಯಲು ವಿಜ್ಞಾನಿಗಳಾದ ಸಂಜಯ ಪಾಟೀಲ, ಎಸ್. ಎಂ. ಮರೆಗುದ್ದಿ ಮತ್ತು ರವೀಂದ್ರ ಗಡಾದ ಅವರ ಮಾರ್ಗದರ್ಶನ ಕಾರಣ. ಎಸ್‌ಎನ್‌ಕೆ 13374 ಬೀಜದ ನಾಟಿ ಮಾಡಿ ಆರಂಭದಲ್ಲಿ ಹನಿ ನೀರಾವರಿ ಪದ್ಧತಿ ಅನುಸರಿಸಿದೆವು. ತಿಪ್ಪೆ ಗೊಬ್ಬರ, ನ್ಯೂಟ್ರಿಮೆಂಟ್ ರಸಗೊಬ್ಬರ ಬಳಸಿದ್ದೇವೆ. ಸಾಲಿನಿಂದ ಸಾಲಿಗೆ 7 ಅಡಿ ಮತ್ತು ಗಿಡದಿಂದ ಗಿಡಕ್ಕೆ 2 ಅಡಿ ಅಂತರದಲ್ಲಿ ಜಿಗ್‌ಜಾಗ್ ಮಾದರಿಯಲ್ಲಿ ಬೆಳೆಸಿದೆವು' ಎಂದು ರೈತ ನಾರಾಯಣ ಅರ್ಜುನ ಸಾಳುಂಕೆ ತಿಳಿಸಿದರು.

## ಸುಳ್ಳು ಜಾತಿ ಪ್ರಮಾಣಪತ್ರ ಸಲ್ಲಿಕೆ: ಸಶಸ್ತ್ರ ಪೊಲೀಸ್ ಪೇದೆಗೆ 7 ವರ್ಷ ಜೈಲು



ಹಾವೇರಿ: ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಪಡೆದು ಸಶಸ್ತ್ರ ಪೊಲೀಸ್ ಪೇದೆ ಹುದ್ದೆಗೆ ಆಯ್ಕೆಯಾಗಿದ್ದ ವ್ಯಕ್ತಿಯೊಬ್ಬನಿಗೆ ಇಲ್ಲಿನ ಒಂದನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 7 ವರ್ಷ ಜೈಲು ಹಾಗೂ 30 ಸಾವಿರ ರೂ. ದಂಡ ವಿಧಿಸಿದೆ.

ಸೋಮಶೇಖರ್ ಭೀಮಪ್ಪ ಕುಂಕುಮಗಾರ ಎಂಬಾತ ಶಿಕ್ಷೆಗೆ ಗುರಿಯಾದ ಅಪರಾಧಿಯಾಗಿದ್ದಾನೆ. ಹಿರೇಕೆರೂರು ತಾಲೂಕಿನ ಭೋಗಾವಿ ಗ್ರಾಮದ ಈತ ಮೂಲತಃ ಕುಂಕುಮಗಾರ (ಬಲಿಜ ಜನಾಂಗ) ಜಾತಿಗೆ ಸೇರಿದ್ದರೂ ಸಹ, ಭೋಗಾವಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾಗಿ ಕಾರ್ಯನಿರ್ವಹಿಸುತ್ತಿದ್ದ ಮೃತ ಹನುಮಂತಪ್ಪ ತಳವಾರನ ಸಹಕಾರ ಪಡೆದು ಚನ್ನದಾಸರ ಎಂದು ಜಾತಿ ಕಾಲಂನಲ್ಲಿ ನಮೂದಿಸಿದ್ದ. ಬಳಿಕ ಸುಳ್ಳು ವ್ಯಾಸಂಗ ಪ್ರಮಾಣಪತ್ರ ಹಾಗೂ ಇತರೆ ದಾಖಲಾತಿಗಳನ್ನು ಸೃಷ್ಟಿಸಿ, ಹಿರೇಕೆರೂರು ತಹಸೀಲ್ದಾರರಿಗೆ ಸಲ್ಲಿಸಿ, ಪರಿಶಿಷ್ಟ ಜಾತಿಯ ಪ್ರಮಾಣಪತ್ರ ಪಡೆದಿದ್ದ. ಈ ನಕಲಿ ದಾಖಲಾತಿಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ಸಶಸ್ತ್ರ ಪೊಲೀಸ್ ಪೇದೆ ಹುದ್ದೆಗೆ ಆಯ್ಕೆಯಾಗಿದ್ದಾನೆಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಜಾತಿ ಪರಿಶೀಲನಾ ಸಮಿತಿ ಅಧ್ಯಕ್ಷರ ನಡಾವಳಿಯಿಂದ ಮತ್ತು ತನಿಖೆಯಿಂದ ಆರೋಪ ದೃಢಪಟ್ಟಿದೆ.

ಈ ಆಧಾರದ ಮೇಲೆ ಹಿರೇಕೆರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ದಾವಣಗೆರೆ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ತನಿಖಾಧಿಕಾರಿ ಪೊಲೀಸ್ ಆರಕ್ಷಕ ಉಪ ನಿರೀಕ್ಷಕರಾದ ಜಯರತ್ನಮ್ಮ ಅವರು ಪ್ರಕರಣದ ತನಿಖೆ ನಡೆಸಿ ದೋಷಾರೋಪಣಾ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

ತಿದ್ದುಪಡಿ ಕಾಯ್ದೆ– 2015 ಅಡಿಯಲ್ಲಿ ಆಪಾದನೆಗಳು ರುಜುವಾತದ ಹಿನ್ನೆಲೆಯಲ್ಲಿ ನ್ಯಾ.ಜಿ.ಎಲ್.ಲಕ್ಷ್ಮೀನಾರಾಯಣ ಅವರಿದ್ದ ಪೀಠ ಅಪರಾಧಿಗೆ ಶಿಕ್ಷೆ ಹಾಗೂ ದಂಡ ವಿಧಿಸಿ ತೀರ್ಪು ನೀಡಿದೆ. ಸರ್ಕಾರದ ಪರವಾಗಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸರ್ಕಾರಿ ಅಭಿಯೋಜಕರಾದ ಸರೋಜಾ ಜಿ.ಕೂಡಲಗಿಮಠ ಅವರು ವಾದ ಮಂಡಿಸಿದ್ದರು.

## ಲಾರಿ-ಜೀಪ್ ಡಿಕ್ಕಿ: ಸ್ಥಳದಲ್ಲೇ ನಾಲ್ವರ ದುರ್ಮರಣ



ಕಲಬುರಗಿ: ಅಫಜಲಪುರ-ಕಲಬುರಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ನಾಲ್ವರು ಸ್ಥಳದಲ್ಲಿಯೇ ದಾರುಣವಾಗಿ ಮೃತಪಟ್ಟ ಘಟನೆ ನಡೆದಿದೆ.

ಲಾರಿ ಹಾಗೂ ಜೀಪ್ ನಡುವೆ ನಡೆದ ಅಪಘಾತದಲ್ಲಿ ಸಂತೋಷ್ (40), ಶಂಕರ್ (55), ಸಿದ್ದಮ್ಮ (50), ಹುಚ್ಚಪ್ಪ (05) ಮೃತಪಟ್ಟಿದ್ದಾರೆ. ಘಟನೆಯಲ್ಲಿ ಗಂಭೀರ ಗಾಯಗೊಂಡಿರುವ ಪೂಜಾ ಕಲಬುರಗಿಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ.

ಮೃತರೆಲ್ಲರೂ ಅಫಜಲಪುರ ಮಾಡ್ಯಾಳ ಗ್ರಾಮದ ನಿವಾಸಿಗಳಾಗಿದ್ದಾರೆ. ಇವರು ಅಫಜಲಪುರ ಕಡೆಯಿಂದ ಮಲ್ಲಾಬಾದ್ ಕಡೆ ಜೀಪ್ನಲ್ಲಿ ಹೊರಟಿದ್ದರು. ಇತ್ತ ಕಲಬುರಗಿ ಕಡೆಯಿದ ಹೊರಟಿದ್ದ ಲಾರಿಗೆ ಈ ಜೀಪ್ ಡಿಕ್ಕಿ ಹೊಡೆದಿದ್ದು, ಸಂಪೂರ್ಣ ನಜ್ಜುಗುಜ್ಜಾಗಿದೆ. ಸ್ಥಳಕ್ಕೆ ಅಫಜಲಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಸಂಪುಟ: 4 ಸಂಚಿಕೆ: 271 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089